ಸಂಪುಟ : 11 ಸಂಚಿಕೆ: 68 ಪುಟ : 4+2 ಬೆಲೆ: 3.00 ಮಂಗಳವಾರ ಏಪ್ರಿಲ್ 14 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 68 Pages : 4+2 Price : 3.00 Tuesday April 14 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕುರ್ತಕೋಟಿಯಲ್ಲಿ ಭೀಮ ಮಂದಿರ ಶಂಕುಸ್ಥಾಪನೆ ಮುಂದೂಡಿಕೆ



■ವಿಜಯಸಾಕ್ಷಿ ಸುದ್ದಿ, ಗದಗ

ತಾಲೂಕಿನ ಕುರ್ತಕೋಟಿ ಗ್ರಾಮದಲ್ಲಿ ಎಪ್ರಿಲ್ 14ರಂದು ಹಮ್ಮಿಕೊಳ್ಳಲಾಗಿದ್ದ ಭೀಮ ಮಂದಿರದ ಶಂಕುಸ್ಥಾಪನೆ ಹಾಗೂ ಬಿ.ಆರ್ ಅಂಬೇಡ್ಕರ್ ಅವರ 135ನೇ ಜಯಂತಿ ಕಾರ್ಯಕ್ರಮವನ್ನು ಅನಿವಾರ್ಯ ಕಾರಣಗಳಿಂದ ಮುಂದೂಡಲಾಗಿದೆ ಎಂದು ಮುಖಂಡರಾದ ಅನಿಲ್ ಮೆಣಸಿನಕಾಯಿ ತಿಳಿಸಿದ್ದಾರೆ.

ಅಯೋಧ್ಯೆಯ ರಾಮ ಮಂದಿರದ ಮಾದರಿಯಲ್ಲಿ ಭೀಮ ಮಂದಿರ ನಿರ್ಮಾಣಕ್ಕೆ ಶಿಲಾನ್ಯಾಸವನ್ನು ಅಂಬೇಡ್ಕರ್ ಜಯಂತಿಯಂದು ನೆರವೇರಿಸಲು ತೀರ್ಮಾನಿಸಲಾಗಿತ್ತು. ಈ ಐತಿಹಾಸಿಕ ಕಾರ್ಯಕ್ರಮವನ್ನು ಜಿಲ್ಲಾಮಟ್ಟದಲ್ಲಿ ವಿಜೃಂಭಣೆಯಿಂದ ಆಚರಿಸಲು ಎಲ್ಲಾ ಸಿದ್ಧತೆಗಳನ್ನು ಮಾಡಿಕೊಳ್ಳಲಾಗಿತ್ತು.

ಆದರೆ, ಕಾರಣಾಂತರಗಳಿಂದಾಗಿ ಕಾರ್ಯಕ್ರಮವನ್ನು ತಾತ್ಕಾಲಿಕವಾಗಿ ಮುಂದೂಡಲಾಗಿದೆ. ಶೀಘ್ರದಲ್ಲೇ ಭೀಮ ಮಂದಿರದ ಶಂಕುಸ್ಥಾಪನೆ ನೆರವೇರಿಸುವ ಜೊತೆಗೆ ಅಂಬೇಡ್ಕರ್ ಜಯಂತಿಯನ್ನು ಅದ್ಧೂರಿಯಾಗಿ ಆಚರಿಸಲಾಗುವುದು ಎಂದು ಅವರು ತಿಳಿಸಿದ್ದಾರೆ.

ಕಾರ್ಯಕ್ರಮದ ಹೊಸ ದಿನಾಂಕವನ್ನು ಶೀಘ್ರದಲ್ಲೇ ಅಧಿಕೃತವಾಗಿ ಪ್ರಕಟಿಸಲಾಗುವುದು ಎಂದು ಅನಿಲ್ ಮೆಣಸಿನಕಾಯಿ ಮಾಹಿತಿ ನೀಡಿದ್ದಾರೆ.

## ಇಂದು ಜಿಲ್ಲಾ ಕಾಂಗ್ರೆಸ್ ಸಮಿತಿಯಿಂದ ಡಾ. ಬಿ.ಆರ್. ಅಂಬೇಡ್ಕರ್ ಜಯಂತಿ



■ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಜಿಲ್ಲಾ ಕಾಂಗ್ರೆಸ್ ಸಮಿತಿಯ ಕಚೇರಿಯಲ್ಲಿ ಜಿಲ್ಲಾ ಕಾಂಗ್ರೆಸ್ ಸಮಿತಿ, ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಸಮಿತಿ, ಜಿಲ್ಲಾ ಕಾಂಗ್ರೆಸ್ ಪ್ರಚಾರ ಸಮಿತಿ, ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗ, ಬೆಟಗೇರಿ ಶಹರ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗ, ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ. ಜಿಲ್ಲಾ ಅಲ್ಪಸಂಖ್ಯಾತ ಕಾಂಗ್ರೆಸ್ ಸಮಿತಿ, ಜಿಲ್ಲಾ ಪರಿಶಿಷ್ಟ ಪಂಗಡ ವಿಭಾಗ ಹಾಗೂ ಜಿಲ್ಲಾ ಮಹಿಳಾ ಕಾಂಗ್ರೆಸ್ ಸಮಿತಿ, ಜಿಲ್ಲಾ ಓಬಿಸಿ ಸಮಿತಿ ವತಿಯಿಂದ 14–4–2026ರ ಬೆಳಿಗ್ಗೆ 10ಕ್ಕೆ ಸಂವಿಧಾನ ಶಿಲ್ಪಿ, ಮಹಾನ್ ಮಾನವತಾವಾದಿ. ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ 135 ನೇ ಜಯಂತೋತ್ಸವ ಕಾರ್ಯಕ್ರಮ ಆಚರಿಸಲಾಗುವುದು.

ಅದಕ್ಕೂ ಮುನ್ನ ಬೆಳಿಗ್ಗೆ 8ಕ್ಕೆ ಗದಗ–ಬೆಟಗೇರಿ ನಗರಸಭೆ ಆವರಣದಲ್ಲಿರುವ ಡಾ. ಬಿ.ಆರ್. ಅಂಬೇಡ್ಕರ್ ಅವರ ಮೂರ್ತಿಗೆ ಕಾಂಗ್ರೆಸ್ ನಾಯಕರಿಂದ ಮಾಲಾರ್ಪಣೆ ಮಾಡಲಾಗುವುದು. ಈ ಹಿನ್ನೆಲೆಯಲ್ಲಿ ಜಿಲ್ಲಾ ಕಾಂಗ್ರೆಸ್ ಪಕ್ಷದ ಎಲ್ಲಾ ಮುಂಚೂಣಿ ಘಟಕ ಅಧ್ಯಕ್ಷರು, ಪದಾಧಿಕಾರಿಗಳು ಮತ್ತು ಕಾರ್ಯಕರ್ತರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಜಿಲ್ಲಾ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಅಧ್ಯಕ್ಷರು ಬಸವರಾಜ ಎಂ. ಕಡೆಮನಿ, ಗದಗ–ಬೆಟಗೇರಿ ಶಹರ ಕಾಂಗ್ರೆಸ್ ಪರಿಶಿಷ್ಟ ಜಾತಿ ವಿಭಾಗದ ಶಂಭು ಎನ್. ಕಾಳೆ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸುಸಜ್ಜಿತ ಕ್ರಿಕೆಟ್ ಕ್ರೀಡಾಂಗಣ ನಿರ್ಮಾಣಕ್ಕೆ ಕ್ರಮ: ಸಚಿವ ಎಚ್.ಕೆ. ಪಾಟೀಲ

# 2030ರೊಳಗೆ ಗದಗನಲ್ಲಿ ರಣಜಿ ಪಂದ್ಯಾವಳಿ ಆಯೋಜನೆ ಗುರಿ



" ಕಳೆದ ಸಾಲಿನಲ್ಲಿ ಗದಗ ನಗರದಲ್ಲಿ ನಡೆದ ಕೆ.ಎಚ್.ಪಾಟೀಲ ಕ್ರಿಕೆಟ್ ಲೀಗ್ ಸೀಸನ್ 1 ಅಭೂತಪೂರ್ವ ಯಶಸ್ಸ ಕಂಡಿದ್ದು, ಅಲ್ಲಿ ಉತ್ತಮ ಪ್ರದರ್ಶನ ನೀಡಿದ ನಮ್ಮ ಯುವಕರು ರಾಜ್ಯ ಮಟ್ಟದಲ್ಲಿ ಗಮನ ಸೆಳೆದಿದ್ದಾರೆ. ಅದರಂತೆ ಸೀಸನ್ –2 ಕೂಡಾ ಯಶಸ್ವಿಯಾಗಲಿದೆ "

– **ಎಚ್.ಕೆ. ಪಾಟೀಲ,** ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ.

■ವಿಜಯಸಾಕ್ಷಿ ಸುದ್ದಿ, ಗದಗ

2030ರ ವೇಳೆಗೆ ಗದಗ ನಗರದಲ್ಲಿ ಎಲ್ಲಾ ಸೌಲಭ್ಯಗಳನ್ನೊಳಗೊಂಡ ಸುಸಜ್ಜಿತ ಕ್ರಿಕೆಟ್ ಕ್ರೀಡಾಂಗಣ ನಿರ್ಮಿಸಿ, ರಣಜಿ ಪಂದ್ಯಾವಳಿಗಳನ್ನು ಆಯೋಜಿಸಲು ಅಗತ್ಯ ಕ್ರಮಗಳನ್ನು ಕೈಗೊಳ್ಳಲಾಗುವುದು ಎಂದು ಕಾನೂನು ಹಾಗೂ ಪ್ರವಾಸೋದ್ಯಮ ಸಚಿವ ಎಚ್.ಕೆ ಪಾಟೀಲ ತಿಳಿಸಿದ್ದಾರೆ.

ಭಾನುವಾರ ನಗರದ ವಿದ್ಯಾದಾನ ಸಮಿತಿ ಮೈದಾನದಲ್ಲಿ ಆಯೋಜಿಸಲಾದ ಕೆ.ಎಚ್. ಪಾಟೀಲ ಕ್ರಿಕೆಟ್ ಲೀಗ್ ಸೀಸನ್□2 ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿ ಅವರು ಮಾತನಾಡಿದರು.

ಗದಗದಲ್ಲಿ ರಣಜಿ ಮಟ್ಟದ ಪಂದ್ಯಗಳು ನಡೆಯಬೇಕು ಎಂಬ ಉದ್ದೇಶದಿಂದ ಈಗಾಗಲೇ ರಾಷ್ಟ್ರೀಯ ಹೆದ್ದಾರಿಗೆ ಹೊಂದಿಕೊಂಡಿರುವ 12 ಎಕರೆ ಜಮೀನನ್ನು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆಗೆ ಹಸ್ತಾಂತರಿಸಲಾಗಿದೆ. ಕ್ರೀಡಾಂಗಣಕ್ಕೆ ಅಗತ್ಯವಿರುವ ಬೋರ್‌ವೆಲ್ ಹಾಗೂ ನಿರಂತರ ನೀರಿನ ಸೌಲಭ್ಯವನ್ನು ಕೂಡ ಕಲ್ಪಿಸಲಾಗಿದೆ ಎಂದು ಹೇಳಿದರು.

ರಾಜ್ಯ ಕ್ರಿಕೆಟ್ ಸಂಸ್ಥೆ ಹಾಗೂ ಧಾರವಾಡ ವಲಯದ ಈರಣ್ಣ ಸವಡಿ ಅವರು ಈ ಯೋಜನೆಗೆ ವಿಶೇಷ ಆಸಕ್ತಿ ವಹಿಸಿ ಕಾರ್ಯ ನಿರ್ವಹಿಸಬೇಕು ಎಂದು ಸೂಚಿಸಿದರು.

ಕ್ರಿಕೆಟ್ ಇಂದು ಅತ್ಯಂತ ಶ್ರೀಮಂತ ಕ್ರೀಡೆಯಾಗಿ ಬೆಳೆದಿದ್ದು, ಗದಗ ಭಾಗದ ಗ್ರಾಮೀಣ ಪ್ರತಿಭೆಗಳಲ್ಲಿ ಅಂತಾರಾಷ್ಟ್ರೀಯ ಮಟ್ಟಕ್ಕೆ ಏರುವ ಸಾಮರ್ಥ್ಯವಿದೆ. ಆದರೆ ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ಅವರು ಹಿಂದೆ ಉಳಿದಿದ್ದರು.

ಈಗ ಆ ಕೊರತೆಯನ್ನು ನೀಗಿಸಲಾಗುತ್ತಿದೆ. ಈ ಲೀಗ್ ಪಂದ್ಯಾವಳಿಗಳು ಯುವಕರಿಗೆ ಉತ್ತಮ ಪ್ರೇರಣೆಯಾಗಲಿ ಎಂದು ಅವರು ಆಶಿಸಿದರು.

ಅಂತಾರಾಷ್ಟ್ರೀಯ ಮಾಜಿ ಕ್ರಿಕೆಟಿಗ ಸುನಿಲ್ ಜೋಶಿ ಮಾತನಾಡಿ, ಗದಗ ಯುವಕರಲ್ಲಿ ಐಪಿಎಲ್ ಮಟ್ಟದಲ್ಲಿ ಆಡುವ ಸಾಮರ್ಥ್ಯವಿದೆ. ಉತ್ತಮ ಕ್ರೀಡಾಂಗಣ ನಿರ್ಮಾಣಕ್ಕೆ ತಾನು ಸಹ ವಿಶೇಷ ಆದ್ಯತೆ ನೀಡಿ ಶ್ರಮಿಸುವುದಾಗಿ ಭರವಸೆ ನೀಡಿದರು.

ಕೆಎಸ್‌ಸಿಎ ಧಾರವಾಡ ವಲಯದ ಸಂಯೋಜಕರಾದ ಈರಣ್ಣ ಸವಡಿ ಮಾತನಾಡಿ, ಸಚಿವರ ಆಶಯದಂತೆ 2030ರೊಳಗೆ ರಣಜಿ ಪಂದ್ಯಗಳಿಗೆ ಸೂಕ್ತವಾದ ಮೈದಾನವನ್ನು ಸಜ್ಜುಗೊಳಿಸಲು ಶ್ರಮಿಸುವುದಾಗಿ ಹೇಳಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಿ.ಆರ್.ಪಾಟೀಲ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರ್ ಸಾಬ ಬಬರ್ಚಿ, ಬಿ.ಬಿ.ಅಸೂಟಿ, ಅಶೋಕ ಮಂದಾಲಿ, ಜಿಪಂ ಮಾಜಿ ಅಧ್ಯಕ್ಷ ಸಿದ್ಧಲಿಂಗೇಶ್ವರ ಪಾಟೀಲ, ಮಿಥುನ್ ಪಾಟೀಲ, ವೆಂಕಟೇಶಗೌಡ ಪಾಟೀಲ, ಬಸವರಾಜ ಕಡೇಮನಿ, ವಿದ್ಯಾಧರ ದೊಡ್ಡಮನಿ, ಡಾ.ಎಸ್. ಆರ್.ನಾಗನೂರ, ಡಾ.ವೇಮನ ಸಾಹುಕಾರ, ಉಮರ್ ಫಾರೂಕ್ ಹುಬ್ಬಳ್ಳಿ, ಸರ್ಫರಾಜ ಶೇಖ ಮುಂತಾದವರು ಹಾಜರಿದ್ದರು.

ಬಾಹುಬಲಿ ಜೈನರ ನಿರೂಪಿಸಿದರು. ಪಂದ್ಯಾವಳಿಯ ಆಯೋಜಕ ಕೃಷ್ಣಗೌಡ ಪಾಟೀಲ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

### ಸಚಿವ ಸಂಪುಟ ಪುನರ್‌ರಚನೆಗೆ ಒತ್ತಡ: ಜಿ.ಎಸ್. ಪಾಟೀಲ್ ದೆಹಲಿ ಪಯಣ

# 'ನಾಲ್ಕು ಬಾರಿ ಗೆದ್ದವರಿಗೆ ಅವಕಾಶ ನೀಡಿ'

■ವಿಜಯಸಾಕ್ಷಿ ಸುದ್ದಿ, ಗದಗ

ರಾಜ್ಯ ಸಚಿವ ಸಂಪುಟ ಪುನರ್‌ರಚನೆ ಕುರಿತ ಚರ್ಚೆಗಳು ಗರಿಗೆದರಿರುವ ನಡುವೆ, ಗದಗ ಜಿಲ್ಲೆಯ ರೋಣ ಕ್ಷೇತ್ರದ ಶಾಸಕ ಜಿ.ಎಸ್. ಪಾಟೀಲ್ ಅವರು ಸಚಿವ ಸ್ಥಾನಕ್ಕಾಗಿ ಹೈಕಮಾಂಡ್ ಮೇಲೆ ಒತ್ತಡ ಹೆಚ್ಚಿಸಿದ್ದಾರೆ. ನಾಲ್ಕು ಬಾರಿ ಶಾಸಕರಾಗಿ ಆಯ್ಕೆಯಾದ ತಮ್ಮಂತಹ ಹಿರಿಯರಿಗೆ ಅವಕಾಶ ನೀಡಬೇಕು ಎಂದು ಅವರು ಸ್ಪಷ್ಟವಾಗಿ ಆಗ್ರಹಿಸಿದ್ದಾರೆ.



ಖಾಸಗಿ ವಾಹಿನಿಯೊಂದಿಗೆ ಮಾತನಾಡಿದ ಪಾಟೀಲ್, ತಾವು ಎಂಟು ಬಾರಿ ಚುನಾವಣೆಯಲ್ಲಿ ಸ್ಪರ್ಧಿಸಿ ನಾಲ್ಕು ಬಾರಿ ಗೆದ್ದಿರುವುದನ್ನು ಉಲ್ಲೇಖಿಸಿ, "ಪಕ್ಷದ ಶಿಸ್ತಿನ ಸಿಪಾಯಿಯಾಗಿ ಕೆಲಸ ಮಾಡಿರುವ ನನಗೆ ಸಚಿವ ಸ್ಥಾನ ನೀಡುವುದು ನ್ಯಾಯಸಮ್ಮತ" ಎಂದು ಹೇಳಿದ್ದಾರೆ.

ಇದೇ ವೇಳೆ, ಎರಡೂವರೆ ವರ್ಷಗಳ ಬಳಿಕ ಸಚಿವ ಸಂಪುಟದಲ್ಲಿ ಬದಲಾವಣೆ ಮಾಡುವ ಭರವಸೆ ನೀಡಲಾಗಿತ್ತು ಎಂದು ಅವರು ನೆನಪಿಸಿದರು.

ಈಗಾಗಲೇ ಆ ಅವಧಿ ಪೂರ್ಣಗೊಂಡು ಮೂರನೇ ವರ್ಷ ನಡೆಯುತ್ತಿರುವ ಹಿನ್ನೆಲೆಯಲ್ಲಿ, ಹಳೆಯ ಸಚಿವರಿಗೆ ಪಕ್ಷದ ಸಂಘಟನೆ ಜವಾಬ್ದಾರಿಗಳನ್ನು ನೀಡುತ್ತಾ ಹೊಸ ಮುಖಗಳಿಗೆ ಅವಕಾಶ ಕಲ್ಪಿಸಬೇಕು ಎಂದು ಅಭಿಪ್ರಾಯಪಟ್ಟಿದ್ದಾರೆ.

"ನಾಲ್ಕು ಬಾರಿ ಆಯ್ಕೆಯಾಗಿರುವ ನನ್ನಂತಹವರಿಗೆ ಸಚಿವ ಸ್ಥಾನ ನೀಡುವುದು ನ್ಯಾಯ. ನಾನು ಪಕ್ಷದ ಶಿಸ್ತಿನ ಸಿಪಾಯಿ."

– **ಜಿ.ಎಸ್. ಪಾಟೀಲ್,** ರೋಣ ಶಾಸಕ

ಈ ಬೆಳವಣಿಗೆಯ ಭಾಗವಾಗಿ, ಜಿ.ಎಸ್. ಪಾಟೀಲ್ ಸೇರಿದಂತೆ ಸುಮಾರು 25ರಿಂದ 35 ಮಂದಿ ಹಿರಿಯ ಶಾಸಕರು ದೆಹಲಿಗೆ ತೆರಳಿ ಪಕ್ಷದ ರಾಷ್ಟ್ರೀಯ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಮತ್ತು ರಾಹುಲ್ ಗಾಂಧಿ ಅವರನ್ನು ಭೇಟಿ ಮಾಡಿ ತಮ್ಮ ಬೇಡಿಕೆಯನ್ನು ಮಂಡಿಸಲು ತೀರ್ಮಾನಿಸಿದ್ದಾರೆ. ಈ ಭೇಟಿ ರಾಜ್ಯ ರಾಜಕೀಯದಲ್ಲಿ ಹೊಸ ಚರ್ಚೆಗೆ ಕಾರಣವಾಗಿದೆ.

ರಾಜಕೀಯ ವಿಶ್ಲೇಷಕರ ಪ್ರಕಾರ, ಸಚಿವ ಸ್ಥಾನ ಹಂಚಿಕೆಯಲ್ಲಿ ಸಮತೋಲನ ಸಾಧಿಸುವುದು ಕಾಂಗ್ರೆಸ್ ನಾಯಕತ್ವಕ್ಕೆ ಸವಾಲಾಗಿದ್ದು, ಪ್ರಾದೇಶಿಕ, ಜಾತಿ ಹಾಗೂ ಅನುಭವದ ಆಧಾರದ ಮೇಲೆ ಒತ್ತಡಗಳು ಹೆಚ್ಚಾಗುತ್ತಿವೆ. ಹಿರಿಯ ಶಾಸಕರು ಒಟ್ಟಾಗಿ ಧ್ವನಿ ಎತ್ತಿರುವುದು ಮುಂದಿನ ದಿನಗಳಲ್ಲಿ ಸಂಪುಟ ಪುನರ್‌ರಚನೆಗೆ ವೇಗ ನೀಡುವ ಸಾಧ್ಯತೆ ಇದೆ.


### ಎಸ್ಪಿ ಖಡಕ್ ವಾರ್ನಿಂಗ್ ಬಳಿಕ ಟ್ರ್ಯಾಕ್ಟರ್‌ಗಳ ಸೀಜ್

## ತುಂಗಭದ್ರೆಯಲ್ಲಿ ಅಕ್ರಮ ಮರಳು ದಂಧೆ: ಪೊಲೀಸರ ದಾಳಿ!



■ವಿಜಯಸಾಕ್ಷಿ ಸುದ್ದಿ, ಗದಗ

ತುಂಗಭದ್ರಾ ನದಿಯಲ್ಲಿ ಎಗ್ಗಿಲ್ಲದೇ ಸಾಗುತ್ತಿದ್ದ ಅಕ್ರಮ ಮರಳು ದಂಧೆಗೆ ಗದಗ ಪೊಲೀಸ್ ಇಲಾಖೆ ಕಠಿಣ ಕ್ರಮ ಕೈಗೊಂಡಿದೆ. ಎಸ್ಪಿ ರೋಹನ್ ಜಗದೀಶ್ ನೀಡಿದ ಖಡಕ್ ಎಚ್ಚರಿಕೆಯ ಬೆನ್ನಲ್ಲೇ ಮುಂಡರಗಿ ಪೊಲೀಸರು ಕಾರ್ಯಾಚರಣೆ ನಡೆಸಿ ಐದಕ್ಕೂ ಹೆಚ್ಚು ಟ್ರ್ಯಾಕ್ಟರ್‌ಗಳನ್ನು ವಶಕ್ಕೆ ಪಡೆದಿದ್ದಾರೆ.



ಮುಂಡರಗಿ ತಾಲೂಕಿನ ಗಂಗಾಪೂರ, ಕೊರ್ಲಹಳ್ಳಿ ಹಾಗೂ ಸಿಂಗಟಾಲೂರು ಗ್ರಾಮಗಳ ಸುತ್ತಮುತ್ತ ತುಂಗಭದ್ರಾ ನದಿಯಲ್ಲಿ ಅಕ್ರಮವಾಗಿ ಮರಳು ಸಾಗಾಟ ನಡೆಯುತ್ತಿತ್ತು. ಈ ಅಕ್ರಮ ದಂಧೆಗೆ ಸ್ಥಳೀಯ ಮಟ್ಟದಲ್ಲಿ ತಾಲೂಕು ಆಡಳಿತದ ಸಾಥ್ ಇದೆ ಎಂಬ ಆರೋಪವೂ ಕೇಳಿ ಬಂದಿದೆ.


ಈ ಹಿನ್ನೆಲೆಯಲ್ಲಿ ಎಚ್ಚೆತ್ತ ಎಸ್ಪಿ ರೋಹನ್ ಜಗದೀಶ್ ಅಕ್ರಮ ಮರಳು ▸▸2ನೇ ಪುಟಕ್ಕೆ

### ಆವಾಸ್ ಯೋಜನೆಯಲ್ಲಿ ಅಕ್ರಮ ಆರೋಪ; ಸ್ಥಳ ಪರಿಶೀಲನೆಗೆ ಸ್ಲಮ್ ಸಮಿತಿ ಒತ್ತಾಯ

# ಅರ್ಹ ಫಲಾನುಭವಿಗಳಿಗೆ ವಸತಿ ಕಲ್ಪಿಸಿ

"ಅಧಿಕಾರಿಗಳು ಹಾಗೂ ಗುತ್ತಿಗೆದಾರರ ಎಡವಟ್ಟಿನಿಂದ ಅರ್ಹ ಫಲಾನುಭವಿಗಳಿಗೆ ಮನೆಗಳು ಸಿಗಲೇ ಇಲ್ಲ. ಕೆಲವು ಕಡೆ ಕಾಮಗಾರಿ ಪೂರ್ಣವಾಗಿದೆ ಎಂದು ಹೇಳಲಾಗುತ್ತಿದ್ದರೂ, ವಾಸ್ತವದಲ್ಲಿ ನಿರ್ಮಾಣ ಪೂರ್ಣಗೊಂಡಿಲ್ಲ,"

**–ಇಮ್ತಿಯಾಜ್ ಆರ್ ಮಾನ್ವಿ,** ಜಿಲ್ಲಾ ಸ್ಲಂ ಸಮಿತಿ ಅಧ್ಯಕ್ಷ.



■ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಜಿಲ್ಲಾ ಸ್ಲಂ ಸಮಿತಿ ವತಿಯಿಂದ ಪ್ರಧಾನಮಂತ್ರಿ ಆವಾಸ್ ಯೋಜನೆ ಜಾರಿಯಲ್ಲಿ ಅಕ್ರಮ ನಡೆದಿದೆ ಎಂಬ ಗಂಭೀರ ಆರೋಪ ಕೇಳಿ ಬಂದಿದ್ದು, ಅರ್ಹ ಫಲಾನುಭವಿಗಳಿಗೆ ವಸತಿ ಸೌಲಭ್ಯ ಕಲ್ಪಿಸುವಂತೆ ಸ್ಲಂ ಬೋರ್ಡ್ ಅಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ.

ಗದಗ□ಬೆಟಗೇರಿ ನಗರದಲ್ಲಿ ಮಂಜೂರಾದ 863 ಮನೆಗಳ ಹಂಚಿಕೆ ಪ್ರಕ್ರಿಯೆಯಲ್ಲಿ ನೈಜ ಸ್ಲಂ ನಿವಾಸಿಗಳು ವಂಚಿತರಾಗಿದ್ದಾರೆ ಎಂದು ಸಮಿತಿ ಆರೋಪಿಸಿದೆ. ಈ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ 2.0 ವಸತಿ ಯೋಜನೆಯಡಿ ಅರ್ಹ ಗುಡಿಸಲು ನಿವಾಸಿಗಳನ್ನು ಗುರುತಿಸಿ ಮನೆಗಳನ್ನು ಒದಗಿಸಬೇಕೆಂದು ಒತ್ತಾಯಿಸಲಾಗಿದೆ.

ಸ್ಲಂ ಪ್ರದೇಶಗಳನ್ನು ಬಿಟ್ಟು ಈಗಾಗಲೇ ಮನೆಗಳಿರುವ ಪ್ರದೇಶಗಳಲ್ಲಿ ಮನೆಗಳನ್ನು ನಿರ್ಮಿಸಲಾಗುತ್ತಿದೆ ಎಂಬುದು ಗಂಭೀರ ವಿಷಯವಾಗಿದ್ದು, ಇದು ಸರ್ಕಾರದ ಅನುದಾನದ ದುರುಪಯೋಗಕ್ಕೆ ಕಾರಣವಾಗಿದೆ ಎಂದು ಸಮಿತಿ ದೂರಿದೆ.

ಸಮಿತಿ ಪದಾಧಿಕಾರಿಗಳು ಅಧಿಕಾರಿಗಳಿಗೆ ಮನವಿ ಸಲ್ಲಿಸಿ, ತಕ್ಷಣ ಸ್ಥಳ ಪರಿಶೀಲನೆ ನಡೆಸಿ ಕಳಪೆ ಕಾಮಗಾರಿ ಹಾಗೂ ವಿಳಂಬಕ್ಕೆ ಕಾರಣರಾದ ಗುತ್ತಿಗೆದಾರರ ವಿರುದ್ಧ ಕ್ರಮ ಕೈಗೊಳ್ಳುವಂತೆ ಆಗ್ರಹಿಸಿದ್ದಾರೆ. ಜೊತೆಗೆ ಅರ್ಹ ಫಲಾನುಭವಿಗಳನ್ನು ಗುರುತಿಸಿ 2.0 ವಸತಿ ಯೋಜನೆಯಡಿ ಮನೆಗಳನ್ನು ಒದಗಿಸಬೇಕೆಂದು ಒತ್ತಾಯಿಸಿದ್ದಾರೆ.

ಸಭೆಯಲ್ಲಿ ಸ್ಲಂ ಪ್ರದೇಶಗಳ ಮೂಲಭೂತ ಸಮಸ್ಯೆಗಳನ್ನೂ ಪ್ರಸ್ತಾಪಿಸಲಾಗಿದ್ದು, ಮಹಿಳೆಯರಿಗಾಗಿ ಶೌಚಾಲಯ ನಿರ್ಮಾಣ, ಸ್ಲಂ ಭವನಗಳಿಗೆ ಅನುದಾನ, ಅಘೋಷಿತ ಗುಡಿಸಲು ಪ್ರದೇಶಗಳ ಘೋಷಣೆ ಹಾಗೂ ಜನಸಂಖ್ಯೆಗೆ ಅನುಗುಣವಾಗಿ ಭೂಮಿ ಖರೀದಿ ಸೇರಿದಂತೆ ಹಲವು ಬೇಡಿಕೆಗಳನ್ನು ಮುಂದಿರಿಸಲಾಗಿದೆ.

ಇದಕ್ಕೆ ಪ್ರತಿಕ್ರಿಯಿಸಿದ ಅಧಿಕಾರಿಗಳು, ಸಮಸ್ಯೆಗಳನ್ನು ಹಂತ ಹಂತವಾಗಿ ▸▸3ನೇ ಪುಟಕ್ಕೆ

## ಮಕ್ಕಳ ಸಮಗ್ರ ಅಭಿವೃದ್ಧಿಗೆ ಕಲೆ-ಕ್ರೀಡೆ ಅಗತ್ಯ



**■ವಿಜಯಸಾಕ್ಷಿ ಸುದ್ದಿ, ಗದಗ**

ಮಕ್ಕಳ ದೈಹಿಕ, ಮಾನಸಿಕ ಹಾಗೂ ಬೌದ್ಧಿಕ ಅಭಿವೃದ್ಧಿಗೆ ಕಲೆ ಮತ್ತು ಕ್ರೀಡೆಗಳ ತರಬೇತಿ ಅತ್ಯಂತ ಅಗತ್ಯವಾಗಿದೆ ಎಂದು ಈಶ್ವರ ದೇವಸ್ಥಾನದ ಟ್ರಸ್ಟ್ ಸಮಿತಿ ಅಧ್ಯಕ್ಷ ಮಲ್ಲಿಕಾರ್ಜುನ ಸಂತೋಷ ಹೇಳಿದರು.

ನಗರದ ಹಾತಲಗಿರಿ ನಾಕ ಹತ್ತಿರ ಇರುವ ಈಶ್ವರ ದೇವಸ್ಥಾನದ ಸಭಾಭವನದಲ್ಲಿ ಸರ್ವಕಲಾ ಕೇಂದ್ರದ ಐದನೇ ವರ್ಷದ ಬೇಸಿಗೆ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪಾಠದ ಜೊತೆಗೆ ಆಟ, ಕಲೆ ಮತ್ತು ಸಾಂಸ್ಕೃತಿಕ ಚಟುವಟಿಕೆಗಳಲ್ಲಿ ಮಕ್ಕಳು ತೊಡಗಿಸಿಕೊಂಡರೆ ಸಮಾಜದಲ್ಲಿ ಉತ್ತಮ ವ್ಯಕ್ತಿತ್ವ ರೂಪುಗೊಳ್ಳುತ್ತದೆ. ಈ ತರದ ಶಿಬಿರಗಳು ಮಕ್ಕಳಲ್ಲಿರುವ ಪ್ರತಿಭೆಯನ್ನು ಹೊರತರುವುದರೊಂದಿಗೆ ಅವರ ಭವಿಷ್ಯ ನಿರ್ಮಾಣಕ್ಕೆ ಪೂರಕವಾಗುತ್ತವೆ ಎಂದು ಅವರು ತಿಳಿಸಿದರು. ಇದೇ ವೇಳೆ ಮಕ್ಕಳ ಬುದ್ಧಿಮಟ್ಟ ಹೆಚ್ಚಿಸುವ ಚಟುವಟಿಕೆಗಳನ್ನು ನಡೆಸಿ ಪ್ರೋತ್ಸಾಹಿಸಿದರು.

ಶಿಬಿರದಲ್ಲಿ ಲಾಠಿ ತರಬೇತಿ, ಭರತನಾಟ್ಯ, ಜಾನಪದ ನೃತ್ಯ, ಜಾನಪದ ಸಂಗೀತ, ನಟನೆ, ಕರಾಟೆ, ಚಿತ್ರಕಲೆ ಸೇರಿದಂತೆ ಬ್ಯಾಡ್ಮಿಂಟನ್, ವಾಲಿಬಾಲ್, ತ್ರೋಬಾಲ್, ಚೆಸ್ ಮೊದಲಾದ ಕ್ರೀಡೆಗಳ ತರಬೇತಿ ನೀಡಲಾಗುತ್ತಿದೆ.

ಕಾರ್ಯಕ್ರಮವನ್ನು ಸಂಸ್ಥೆಯ ಕಾರ್ಯದರ್ಶಿ ಚೇತನ್ ಪಿ.ಎಚ್. ನಡೆಸಿಕೊಟ್ಟರು. ಗದುಗಿನ ಕರಾಟೆ ಗುರು ಪಿ.ಎಸ್. ಹಬೀಬ್ ಉಪಸ್ಥಿತರಿದ್ದರು. ತರಬೇತುದಾರರಾದ ಕುಮಾರಿ ತೇಜಸ್ವಿನಿ ಎಸ್., ಶ್ರೀ ಗಂಗಾಧರ ಎಸ್., ಪ್ರದೀಪ್ ಎನ್., ಕುಮಾರಿ ತೃಪ್ತಿ ಕೆ., ಕುಮಾರಿ ಕುಶಿ ಸೇರಿದಂತೆ ಹಲವರು ಭಾಗವಹಿಸಿದ್ದರು.

# ಬಡವರ ಬಂಧು ಡಾ. ಬಿ.ಆರ್. ಅಂಬೇಡ್ಕರ್

### ಇಂದು ಅಂಬೇಡ್ಕರ್ ಜಯಂತಿ ನಿಮಿತ್ತ ಲೇಖನ

ಸಮಾನತೆ, ಸಂವಿಧಾನ ಮತ್ತು ಸಾಮಾಜಿಕ ನ್ಯಾಯದ ಶಿಲ್ಪಿ ಬಿ.ಆರ್ ಅಂಬೇಡ್ಕರ್ ಅವರು ದಲಿತರ ಸಾಮಾಜಿಕ ಮತ್ತು ಆರ್ಥಿಕ ಸಮಾನತೆಗಾಗಿ ಹೋರಾಡಿದ ಮಹಾನ್ ಭಾರತೀಯ ನಾಯಕರು. ಅವರು ಭಾರತದ ಸಂವಿಧಾನ ಶಿಲ್ಪಿಯಾಗಿ ಹಾಗೂ ಮಾನವತಾವಾದಿಯಾಗಿ ವಿಶ್ವಖ್ಯಾತರಾಗಿದ್ದಾರೆ. ಅವರ ಜನ್ಮದಿನವಾದ ಎಪ್ರಿಲ್ 14ನ್ನು ಪ್ರತಿವರ್ಷ ಅಂಬೇಡ್ಕರ್ ಜಯಂತಿಯಾಗಿ ಆಚರಿಸಲಾಗುತ್ತದೆ.

1891ರ ಎಪ್ರಿಲ್ 14ರಂದು ಮಧ್ಯಪ್ರದೇಶದ ಮಾಹೋದಲ್ಲಿ ರಾಮೋಜಿ ಸಾಕ್ಪಾಲ್ ಮತ್ತು ಭೀಮಾಬಾಯಿ ದಂಪತಿಗಳಿಗೆ ಜನಿಸಿದ ಅಂಬೇಡ್ಕರ್ ಅವರು ಬಾಲ್ಯದಲ್ಲಿಯೇ ಅಸ್ಪೃಶ್ಯತೆಯ ಕಹಿ ಅನುಭವವನ್ನು ಎದುರಿಸಿದರು.

ತಾಯಿ ನಿಧನದ ನಂತರ ಅತ್ತೆಯ ಆರೈಕೆಯಲ್ಲಿ ಬೆಳೆದ ಅವರು ಸಂಕಷ್ಟಗಳ



ನಡುವೆಯೂ ಶಿಕ್ಷಣದತ್ತ ಅಪಾರ ಒಲವು ತೋರಿದರು. ಶಿಕ್ಷಕರ ಪ್ರೋತ್ಸಾಹದಿಂದ “ಅಂಬಾವಾಡೇಕರ್” ಎಂಬ ಹೆಸರು “ಅಂಬೇಡ್ಕರ್” ಆಗಿ ಮಾರ್ಪಟ್ಟಿತು.

**ಉನ್ನತ ವಿದ್ಯಾಭ್ಯಾಸ – ವಿಶ್ವ ಮಟ್ಟದ ಸಾಧನೆ:** ಅಂಬೇಡ್ಕರ್ ಅವರು ಅಮೇರಿಕಾದ ಕೊಲಂಬಿಯಾ ವಿಶ್ವವಿದ್ಯಾಲಯ ಹಾಗೂ ಇಂಗ್ಲೆಂಡ್‌ನ ಲಂಡನ್ ಸ್ಕೂಲ್ ಆಫ್ ಎಕಾನಾಮಿಕ್ಸ್‌ನಲ್ಲಿ ಅಧ್ಯಯನ ಮಾಡಿ ಅರ್ಥಶಾಸ್ತ್ರ, ಕಾನೂನು ಮತ್ತು ರಾಜಕೀಯದಲ್ಲಿ ಪರಿಣತಿ ಗಳಿಸಿದರು.

ಅವರ ವಿದ್ಯಾಭ್ಯಾಸವು ಸಮಾಜ ಪರಿವರ್ತನೆಗೆ ಬಲವಾದ ಅಡಿಪಾಯವಾಯಿತು.

ಭಾರತಕ್ಕೆ ಮರಳಿದ ನಂತರ, ಅವರು ದಲಿತರ ಹಕ್ಕುಗಳಿಗಾಗಿ ಹೋರಾಟ ನಡೆಸಿದರು. “ಶಿಕ್ಷಣ ಪಡೆಯಿರಿ, ಸಂಘಟಿತರಾಗಿ, ಹೋರಾಡಿರಿ” ಎಂಬ ಅವರ ಘೋಷಣೆ ಜನರಲ್ಲಿ ಜಾಗೃತಿ ಮೂಡಿಸಿತು.

#### ಆದರ್ಶ ಜೀವನ – ಯುವಕರಿಗೆ ಪ್ರೇರಣೆ

ಅವರ ಜೀವನವು ಶ್ರಮ, ದೃಢನಿಶ್ಚಯ ಮತ್ತು ಸಮಾನತೆಯ ಸಂಕೇತವಾಗಿದೆ.

ಇಂದಿನ ಯುವಕರು ಅವರ ಆದರ್ಶಗಳನ್ನು ಅನುಸರಿಸಿದರೆ ಉತ್ತಮ ಸಮಾಜ ನಿರ್ಮಾಣ ಸಾಧ್ಯ. ಅಂಬೇಡ್ಕರ್ ಜಯಂತಿಯನ್ನು ಆಚರಿಸುವುದಷ್ಟೇ ಅಲ್ಲ, ಅವರ ಚಿಂತನೆಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದು ಅತ್ಯಂತ ಮುಖ್ಯ.

ಅವರು ಅಸ್ಪೃಶ್ಯತೆ ನಿವಾರಣೆ ಮತ್ತು ಸಮಾನ ಹಕ್ಕುಗಳಿಗಾಗಿ ನಿರಂತರವಾಗಿ ಹೋರಾಡಿದರು.

ಭಾರತದ ಸಂವಿಧಾನ ರಚನಾ ಸಮಿತಿಯ ಅಧ್ಯಕ್ಷರಾಗಿ, ಅಂಬೇಡ್ಕರ್ ಅವರು ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಹಕ್ಕು, ಸ್ವಾತಂತ್ರ್ಯ ಮತ್ತು ನ್ಯಾಯ ಒದಗಿಸುವ ಸಂವಿಧಾನವನ್ನು ರೂಪಿಸಿದರು. ಇದು ಭಾರತದ ಪ್ರಜಾಪ್ರಭುತ್ವದ ಬಲವಾದ ಅಡಿಪಾಯವಾಗಿದೆ.

ಅಂಬೇಡ್ಕರ್ ಅವರು ಮಹಿಳಾ ಹಕ್ಕುಗಳು, ಕಾರ್ಮಿಕರ ಹಕ್ಕುಗಳು ಮತ್ತು ಸಾಮಾಜಿಕ ನ್ಯಾಯಕ್ಕಾಗಿ ಶ್ರಮಿಸಿದರು. ಜೀವನದ ಅಂತ್ಯದಲ್ಲಿ ಅವರು ಬೌದ್ಧ ಧರ್ಮವನ್ನು ಸ್ವೀಕರಿಸಿ ಸಮಾನತೆ ಮತ್ತು ಶಾಂತಿಯ ಸಂದೇಶವನ್ನು ಸಾರಿದರು.



**–ಅರುಣಾ ಗುಜ್ಜರಿ,**
ಕನ್ನಡ ಉಪನ್ಯಾಸಕರು, ಮುಂಡರಗಿ

## ಸನ್ಮಾರ್ಗ ಕಾಲೇಜಿನ ವಿದ್ಯಾರ್ಥಿನಿ ರೇವತಿ ಉತ್ತರಕರಗೆ ಸನ್ಮಾನ



**■ವಿಜಯಸಾಕ್ಷಿ ಸುದ್ದಿ, ಗದಗ**

ದ್ವಿತೀಯ ಪಿಯುಸಿ ಫಲಿತಾಂಶ ಪ್ರಕಟಗೊಂಡ ಹಿನ್ನೆಲೆಯಲ್ಲಿ ನಗರದ ಸನ್ಮಾರ್ಗ ಕಾಲೇಜಿನ ಪ್ರತಿಭಾನ್ವಿತ ವಿದ್ಯಾರ್ಥಿನಿ ಕುಮಾರಿ ರೇವತಿ ನಾರಾಯಣ ಉತ್ತರಕರ ಅವರು ವಿಜ್ಞಾನ ವಿಭಾಗದಲ್ಲಿ ಶೇ. 96% ಅಂಕ ಪಡೆದು ಕಾಲೇಜಿಗೆ ಪ್ರಥಮ ಸ್ಥಾನ ಗಳಿಸಿ ಗಮನಾರ್ಹ ಸಾಧನೆ ಮಾಡಿದ್ದಾರೆ.

ಈ ಸಾಧನೆಗಾಗಿ ಗದಗ–ಬೆಟಗೇರಿ ವಾರ್ಡ್ ನಂ. 25ರ ಹಿರಿಯರು ವಿದ್ಯಾರ್ಥಿನಿಯ ನಿವಾಸಕ್ಕೆ ಭೇಟಿ ನೀಡಿ ಸನ್ಮಾನಿಸಿ ಗೌರವಿಸಿದರು.

ಈ ಸಂದರ್ಭದಲ್ಲಿ ಬಾಳು ರಂಗರೇಜ, ಈಶ್ವರ ಕೋಟಿ, ಜಗದೀಶ ಹುಬ್ಬಳ್ಳಿ, ಸಂತೋಷ ಹುಬ್ಬಳ್ಳಿ, ಕೃಷ್ಣಾ ಬೇಂದ್ರೆ, ಬಸವರಾಜ ಬಳ್ಳಾರಿ, ಸತೀಶ ಕಾವೇರಿ, ಜಯರಾಜ ಕೋಟಿ, ರವಿ ಹುಬ್ಬಳ್ಳಿ, ಪ್ರಶಾಂತ ಹುಬ್ಬಳ್ಳಿ, ಬಸವರಾಜ ಅಂಗಡಿ, ಸಿದ್ದು ಬಾಳಿಹಳ್ಳಿಮಠ ಸೇರಿದಂತೆ ವಾರ್ಡ್‌ನ ಹಿರಿಯರು ಮತ್ತು ಮುಖಂಡರು ಉಪಸ್ಥಿತರಿದ್ದರು.

# ರಾಜ್ಯ ಸರ್ಕಾರ ಬಡವರ ಪರವಾಗಿಲ್ಲ

### ವಿಬಿಜಿ ರಾಮ್‌ಜಿ ಯೋಜನೆ ಜಾರಿಗೆ ವಿಫಲ– ಬಸವರಾಜ ಬೊಮ್ಮಾಯಿ

**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯ ಸರ್ಕಾರ ಬಡವರ ಪರವಾಗಿ ಕಾರ್ಯನಿರ್ವಹಿಸುತ್ತಿಲ್ಲ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದರು.

ಪಟ್ಟಣದ ಪಂಚಮಸಾಲಿ ಭವನದಲ್ಲಿ ನಡೆದ ರಾಜ್ಯ ಪಂಚಮಸಾಲಿ ಸಮಾಜದ ಗೌರವಾಧ್ಯಕ್ಷ ಬಾವಿಬೆಟ್ಟಪ್ಪ ಅವರ ಅಭಿನಂದನಾ ಗ್ರಂಥ ಬಿಡುಗಡೆ ಸಮಾರಂಭದಲ್ಲಿ ಭಾಗವಹಿಸಿ ಬಳಿಕ ಪತ್ರಕರ್ತರೊಂದಿಗೆ ಮಾತನಾಡಿದ ಅವರು, ವಿಬಿಜಿ ರಾಮ್‌ಜಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೆ ತರಲು ಸರ್ಕಾರ ವಿಫಲವಾಗಿದೆ ಎಂದು



ಹೇಳಿದರು.

“ಅತ್ಯಂತ ಹೊಣೆಗಾರಿಕೆಯಿಂದ ಜಾರಿಗೊಳಿಸಬೇಕಾದ ಈ ಯೋಜನೆಗೆ ಸರ್ಕಾರ ತನ್ನ ಪಾಲಿನ ಅನುದಾನವನ್ನು ಬಿಡುಗಡೆ ಮಾಡದೆ ದಾರಿ ತಪ್ಪಿಸಿದೆ. ಯೋಜನೆಯಲ್ಲಿ ಬದಲಾವಣೆಗಳನ್ನು ಮಾಡಿ ಜನರಿಗೆ ಪಾರದರ್ಶಕವಾಗಿ ಉದ್ಯೋಗ ದಿನಗಳನ್ನು ಸೃಷ್ಟಿಸುವ ಬದಲು ಸರ್ಕಾರ ತನ್ನ ಹೊಣೆಗಾರಿಕೆಯಿಂದ ತಪ್ಪಿಸಿಕೊಳ್ಳುತ್ತಿದೆ,” ಎಂದು ಅವರು ಆರೋಪಿಸಿದರು. ರಾಜ್ಯದಲ್ಲಿ ಅಭಿವೃದ್ಧಿ ಹಾಗೂ ಕಾನೂನು ಸುವ್ಯವಸ್ಥೆ ನೀಡುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಟೀಕಿಸಿದ ಅವರು, ಜನಸಾಮಾನ್ಯರ ಹಿತಾಸಕ್ತಿಗಳನ್ನು ಕಡೆಗಣಿಸಲಾಗಿದೆ ಎಂದು ಆರೋಪಿಸಿದರು.

ಜೊತೆಗೆ, ಜೆಡಿಎಸ್‌ನೊಂದಿಗೆ ಇರುವ ಮೈತ್ರಿಯಿಂದ ಬಿಜೆಪಿಗೆ ಯಾವುದೇ ಹಾನಿಯಾಗಿಲ್ಲ ಎಂದು ತಿಳಿಸಿದ ಅವರು, ಪ್ರಧಾನಿ ನರೇಂದ್ರ ಮೋದಿ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಹಾಕಿದ ಬುನಾದಿಯಲ್ಲಿ ಪಕ್ಷ ಗಟ್ಟಿಯಾಗಿ ನೆಲೆಯೂರಿದೆ ಎಂದರು. ದಾವಣಗೆರೆ ಹಾಗೂ ಬಾಗಲಕೋಟೆ ಉಪಚುನಾವಣೆಗಳಲ್ಲಿ ಜಯ ನಮ್ಮದೇ ಎಂದು ವಿಶ್ವಾಸ ವ್ಯಕ್ತಪಡಿಸಿದರು. ಈ ಸಂದರ್ಭದಲ್ಲಿ ಶಾಸಕ ಕೃಷ್ಣನಾಯ್ಕ, ಮಾಜಿ ಶಾಸಕ ಚಂದ್ರನಾಯ್ಕ, ಜಿಲ್ಲಾ ಅಧ್ಯಕ್ಷ ಸಂಜೀವರೆಡ್ಡಿ ಸೇರಿದಂತೆ ಹಲವರು ಉಪಸ್ಥಿತರಿದ್ದರು.

ಪಟ್ಟಣದಲ್ಲಿ ಬಸವರಾಜ ಬೊಮ್ಮಾಯಿ ಅವರನ್ನು ಸನ್ಮಾನಿಸಲಾಯಿತು. ನಂತರ ಅವರು ಜಿಲ್ಲಾ ಉಪಾಧ್ಯಕ್ಷ ಬಲಹುಣಿಸಿ ರಾಮಣ್ಣ ಅವರ ಗೃಹ ಕಚೇರಿಗೆ ಭೇಟಿ ನೀಡಿದರು. ಈ ವೇಳೆ ಮಂಡಲ ಅಧ್ಯಕ್ಷ ಬೆಣಕಲ್ ಪ್ರಕಾಶ್, ಕೆಚ್ಚಿನ ಬಂಡಿ ಹನುಮಂತಪ್ಪ, ನಗರ ಘಟಕ ಅಧ್ಯಕ್ಷ ಮಂಜುನಾಥ್ ಹಿರೇಮಠ್ ಸೇರಿದಂತೆ ಅನೇಕರು ಹಾಜರಿದ್ದರು.

## 6ನೇ ತರಗತಿ ಪ್ರವೇಶಕ್ಕೆ ಅರ್ಜಿ ಆಹ್ವಾನ

**■ವಿಜಯಸಾಕ್ಷಿ ಸುದ್ದಿ, ಗದಗ**

2026–27ನೇ ಶೈಕ್ಷಣಿಕ ಸಾಲಿಗೆ ಜಿಲ್ಲೆಯ ಪ್ರತಿಷ್ಠಿತ ಶಾಲೆಗಳಲ್ಲಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಪ್ರತಿಭಾವಂತ ವಿದ್ಯಾರ್ಥಿ/ವಿದ್ಯಾರ್ಥಿನಿಯರನ್ನು 6ನೇ ತರಗತಿಗೆ ದಾಖಲಿಸಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ. ಅಭ್ಯರ್ಥಿಗಳು ಪರಿಶಿಷ್ಟ ಜಾತಿ ಅಥವಾ ಪರಿಶಿಷ್ಟ ಪಂಗಡಕ್ಕೆ ಸೇರಿದವರಾಗಿರಬೇಕು. ಪ್ರಸ್ತುತ 5ನೇ ತರಗತಿಯಲ್ಲಿ ಕನಿಷ್ಠ ಶೇ.60 ಅಂಕಗಳನ್ನು ಪಡೆದಿರಬೇಕು. ಕುಟುಂಬದ ವಾರ್ಷಿಕ ಆದಾಯ ರೂ. 2.50 ಲಕ್ಷ ಮಿತಿಯೊಳಗಿರಬೇಕು.

ಅರ್ಜಿಯೊಂದಿಗೆ ವಿದ್ಯಾರ್ಥಿಯ ಜಾತಿ ಮತ್ತು ಆದಾಯ ಪ್ರಮಾಣಪತ್ರ, ಅಂಕಪಟ್ಟಿಗಳ ದೃಢೀಕೃತ ಪ್ರತಿಗಳು ಹಾಗೂ ಎರಡು ಭಾವಚಿತ್ರಗಳನ್ನು ಲಗತ್ತಿಸಬೇಕು. ಲಿಖಿತ ಪ್ರವೇಶ ಪರೀಕ್ಷೆಯ ಮೂಲಕ ಅರ್ಹ ಅಭ್ಯರ್ಥಿಗಳನ್ನು ಆಯ್ಕೆ ಮಾಡಲಾಗುವುದು. ಅರ್ಜಿಗಳನ್ನು ಎಪ್ರಿಲ್ 15ರಿಂದ ಮೇ 04ರವರೆಗೆ ಸಲ್ಲಿಸಬಹುದಾಗಿದೆ. ನಂತರ ಬಂದ ಅರ್ಜಿಗಳನ್ನು ಹಾಗೂ ಅಪೂರ್ಣ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ. ಒಂದೇ ಕುಟುಂಬದಲ್ಲಿನ ಇಬ್ಬರು ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶ ಕಲ್ಪಿಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ. ಹೆಚ್ಚಿನ ಮಾಹಿತಿಗಾಗಿ ಸಮಾಜ ಕಲ್ಯಾಣ ಇಲಾಖೆಯನ್ನು ಸಂಪರ್ಕಿಸಬಹುದಾಗಿದೆ ಎಂದು ಇಲಾಖೆಯ ಉಪನಿರ್ದೇಶಕರು ತಿಳಿಸಿದ್ದಾರೆ.

## ಮುಳಗುಂದ ಪಿಯು ಕಾಲೇಜ್‌ನ ವಾಣಿಜ್ಯ ವಿಭಾಗದಲ್ಲಿ ಉತ್ತಮ ಫಲಿತಾಂಶ







**■ವಿಜಯಸಾಕ್ಷಿ ಸುದ್ದಿ, ಮುಳಗುಂದ**

ಪಟ್ಟಣದ ಸರಕಾರಿ ಪದವಿ ಪೂರ್ವ ಕಾಲೇಜಿನ 2025–26ನೇ ಸಾಲಿನ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ವಾಣಿಜ್ಯ ವಿಭಾಗದ ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಸಾಧಿಸಿದ್ದಾರೆ. ವಿಭಾಗದಲ್ಲಿ ಉಮಾ ಹರ್ತಿ ಅವರು 564 ಅಂಕಗಳನ್ನು ಪಡೆದು ಶೇ. 94% ಗಳಿಸಿ ಪ್ರಥಮ ಸ್ಥಾನ ಪಡೆದಿದ್ದಾರೆ. ಸಂಜನಾ ಪವಾರ ಅವರು 517 ಅಂಕಗಳೊಂದಿಗೆ ಶೇ. 86% ಪಡೆದು ದ್ವಿತೀಯ ಸ್ಥಾನ ಗಳಿಸಿದರೆ, ಪಲ್ಲವಿ ಮದ್ದಿನ ಅವರು 486 ಅಂಕಗಳೊಂದಿಗೆ ಶೇ. 81% ಪಡೆದು ತೃತೀಯ ಸ್ಥಾನ ಪಡೆದಿದ್ದಾರೆ.

ವಿದ್ಯಾರ್ಥಿಗಳ ಈ ಸಾಧನೆಗೆ ಕಾಲೇಜಿನ ಪ್ರಾಚಾರ್ಯರು ಹಾಗೂ ಉಪನ್ಯಾಸಕರು ಅಭಿನಂದನೆ ಸಲ್ಲಿಸಿ, ಮುಂದಿನ ವಿದ್ಯಾಭ್ಯಾಸದಲ್ಲಿ ಇನ್ನಷ್ಟು ಯಶಸ್ಸು ಸಾಧಿಸಲು ಹಾರೈಸಿದರು.

## ತುಂಗಭದ್ರೆಯಲ್ಲಿ ಅಕ್ರಮ ಮರಳು ದಂಧೆ: ಪೊಲೀಸರ ದಾಳಿ!

▶▶ ಮೊದಲನೇ ಪುಟದಿಂದ

ಸಾಗಾಟವನ್ನು ಕಟ್ಟುನಿಟ್ಟಾಗಿ ತಡೆಯುವಂತೆ ಸೂಚನೆ ನೀಡಿದ್ದರು. ಅದರಂತೆ ಅಲರ್ಟ್ ಆದ ಮುಂಡರಗಿ ಪೊಲೀಸರು ದಾಳಿ ನಡೆಸಿ ಅಕ್ರಮ ಸಾಗಾಟದಲ್ಲಿ ತೊಡಗಿದ್ದ ಟ್ರ್ಯಾಕ್ಟರ್‌ಗಳನ್ನು ವಶಕ್ಕೆ ಪಡೆದು ಪ್ರಕರಣ ದಾಖಲಿಸಿದ್ದಾರೆ. ಪೊಲೀಸ್ ಇಲಾಖೆಯ ಈ ಕ್ರಮದಿಂದ ಮರಳು ಮಾಫಿಯಾಗೆ ತಾತ್ಕಾಲಿಕ ಕಡಿವಾಣ ಬಿದ್ದಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಕಠಿಣ ಕ್ರಮ ಕೈಗೊಳ್ಳುವ ಸೂಚನೆ ದೊರೆತಿದೆ.

ಜಿಲ್ಲೆಯಲ್ಲಿ ಅಕ್ರಮ ಮರಳು ದಂಧೆ ಮರುಕಳಿಸುತ್ತಿರುವುದು ಪರಿಸರ ಹಾಗೂ ಆಡಳಿತದ ಮೇಲೆ ಗಂಭೀರ ಪ್ರಶ್ನೆಗಳನ್ನು ಎತ್ತಿದೆ. ಪೊಲೀಸ್ ಇಲಾಖೆಯ ಕ್ರಮದಿಂದ ತಾತ್ಕಾಲಿಕ ತಡೆ ಕಂಡರೂ, ಶಾಶ್ವತ ಪರಿಹಾರಕ್ಕೆ ಕಟ್ಟುನಿಟ್ಟಿನ ನಿಯಂತ್ರಣ ಅಗತ್ಯ ಎಂಬ ಅಭಿಪ್ರಾಯ ವ್ಯಕ್ತವಾಗುತ್ತಿದೆ.

# ಹಳೆಯ ವಿದ್ಯಾರ್ಥಿಗಳಿಂದ ಗುರುವಂದನಾ ಕಾರ್ಯಕ್ರಮ

### “ಗುರು ನಮನ – ಸ್ನೇಹ ಸಮ್ಮಿಲನ” ಮೂಲಕ ಗುರುಗಳಿಗೆ ಗೌರವ, ನೆನಪುಗಳ ಸ್ಮರಣೆ



**■ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದ ಶ್ರೀ ಗಂಗಾವತಿ ಭೀಮಪ್ಪನವರ ಸರ್ಕಾರಿ ಪದವಿ ಪೂರ್ವ ಕಾಲೇಜು (ಪ್ರೌಢಶಾಲೆ ವಿಭಾಗ)ದಲ್ಲಿ 1999–2000 ರಿಂದ 2001–02 ಶೈಕ್ಷಣಿಕ ಸಾಲಿನ 8ನೇ ತರಗತಿಯಿಂದ 10ನೇ ತರಗತಿ ಅಭ್ಯಾಸಿಸಿದ ಹಳೆಯ ವಿದ್ಯಾರ್ಥಿಗಳ ಬಳಗದಿಂದ “ಗುರು ನಮನ – ಸ್ನೇಹ ಸಮ್ಮಿಲನ” ಹೆಸರಿನಲ್ಲಿ ಗುರು ವಂದನಾ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು.

ಕಾರ್ಯಕ್ರಮವನ್ನು ನೂರ್ ಮೊಹಮ್ಮದ್ (ಅಬ್ಬು) ಮತ್ತು ಮಂಗಳ ಗೌರಿ ಅವರು ಪುಷ್ಪ ನಮನದೊಂದಿಗೆ ಉದ್ಘಾಟಿಸಿದರು. ಪ್ರಾರ್ಥನೆಯನ್ನು ಗಂಗಮ್ಮ ಬ್ಯಾಲಾಳು ಹಾಗೂ ಶಾರದಮ್ಮ ಸೋಮನಾಥ್ ನೆರವೇರಿಸಿದರು.

ಈ ಸಂದರ್ಭದಲ್ಲಿ ಕಾಶಿಂ ಶಿಕ್ಷಕರು, ಸುಮಾ ಮೇಡಂ, ಲಲಿತ ಮೇಡಂ, ಸಿರಾಜ್ ಉನ್ನಿಸ್ ಮೇಡಂ, ಮುಖ್ಯೋಪಾಧ್ಯಾಯರು ಸೇರಿದಂತೆ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಗೆ ಗೌರವ ಸಮರ್ಪಿಸಲಾಯಿತು. ನೂರಾರು ಹಳೆಯ ವಿದ್ಯಾರ್ಥಿಗಳು ಹಾಗೂ ಪಟ್ಟಣದ ಯುವಕರು ಕಾರ್ಯಕ್ರಮದಲ್ಲಿ ಪಾಲ್ಗೊಂಡರು.

ಕಾರ್ಯಕ್ರಮದ ಘನ ಅಧ್ಯಕ್ಷತೆಯನ್ನು ವಿ. ಮಲ್ಲಪ್ಪ ಶಿಕ್ಷಕರು ವಹಿಸಿಕೊಂಡಿದ್ದರು. ಪ್ರಾಸ್ತಾವಿಕ ನುಡಿಗಳನ್ನು ಶ್ರೀನಾಥ್ ಶಿಕ್ಷಕರು ಹಾಗೂ ನಾಗರಾಜ್ ಪತ್ತಾರ್ ಮಂಡಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ಪಿ. ಅನಂತ್ ಅವರು ನೆರವೇರಿಸಿದರು.

ಹಳೆಯ ವಿದ್ಯಾರ್ಥಿಗಳ ಪರಿಚಯ ಕಾರ್ಯಕ್ರಮವನ್ನು ಶ್ರೀ ಶಿವಯೋಗಿ ಶಿಕ್ಷಕರು ವಿಶಿಷ್ಟವಾಗಿ ನಡೆಸಿದರು. ಶಾಲೆಯ ನಡೆದು ಬಂದ ದಾರಿಯ ಬಗ್ಗೆ ಕಾಶಿಂ ಸರ್ ಮುಖ್ಯಗುರುಗಳು ವಿಸ್ತಾರವಾಗಿ ಮಾತನಾಡಿದರು. ಇದೇ ಸಂದರ್ಭದಲ್ಲಿ ಎಂಪಿಎಂ ಮಂಜುನಾಥ್, ರವೀಂದ್ರನಾಥ್ ಶಿಕ್ಷಕರು, ಡಿ. ಇಬ್ರಾಹಿಂ ಮುಂತಾದವರು ಮಾತನಾಡಿ ವಿದ್ಯಾರ್ಥಿಗಳಿಗೆ ಶುಭಾಶಯ ಹಾಗೂ ಆಶೀರ್ವಾದಗಳನ್ನು ನೀಡಿದರು. ಹಳೆಯ ವಿದ್ಯಾರ್ಥಿಗಳು ತಮ್ಮ ಗುರುಗಳನ್ನು ಭಕ್ತಿಪೂರ್ವಕವಾಗಿ ಸನ್ಮಾನಿಸಿ ಗೌರವ ಸಮರ್ಪಿಸಿದರು. ಕಾರ್ಯಕ್ರಮವನ್ನು ಪಿ. ಅನಂತ್ ಹಾಗೂ ಕುಮಾರ್ ರಾಥೋಡ್ ಅಚ್ಚುಕಟ್ಟಾಗಿ ನಿರೂಪಿಸಿದರು. ಕೊನೆಯಲ್ಲಿ ಜೋಗಿ ಹನುಮಂತಪ್ಪ ಮತ್ತು ಎಚ್. ವೀರೇಶ್ ವಂದನಾರ್ಪಣೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಹಳೆಯ ವಿದ್ಯಾರ್ಥಿಗಳಾದ ಕೋಟಿ ಕೆಇಬಿ, ಸೋಮು ಚಿಂತ್ರಪಳ್ಳಿ, ನಾಗರಾಜ್ ಮಡಿವಾಳರು, ಎಣ್ಣಿ ದಾದಾಪೀರ್, ತೆಲುಗು ನೆಲ್ಲು ಅಕ್ಬರ್, ಆಟೋ ನಾಗರಾಜ್ ಚಿಂತ್ರಪಳ್ಳಿ, ಪರಶುರಾಮ್ ತಳವಾರ, ಗ್ಯಾಸ್ ನಾಗರಾಜ್ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

# ಯೋಗ–ಧ್ಯಾನದಿಂದ ಮಾನಸಿಕ ಶಾಂತಿ ಸಾಧ್ಯ

### ವಿಶ್ವ ಆರೋಗ್ಯ ದಿನಾಚರಣೆ ಅಂಗವಾಗಿ–ಯೋಗ–ಪ್ರಾಣಾಯಾಮ ಪ್ರಾತ್ಯಕ್ಷಿಕೆ

**■ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ವಿದ್ಯಾರ್ಥಿಗಳು ದೇಹ ಮತ್ತು ಮನಸ್ಸಿನ ಮೇಲೆ ಸಮತೋಲನ ಸಾಧಿಸಲು ಯೋಗ, ಧ್ಯಾನ ಹಾಗೂ ಪ್ರಾಣಾಯಾಮಗಳು ಅತ್ಯಂತ ಅಗತ್ಯವಾಗಿದ್ದು, ಇವು ಆರೋಗ್ಯಕರ ಜೀವನದ ಪ್ರಮುಖ ಸ್ತಂಭಗಳಾಗಿವೆ ಎಂದು ಪ್ರಾಚಾರ್ಯೆ ಡಾ. ಸುಧಾ ಕೌಜಗೇರಿ ಹೇಳಿದರು.

ಇಲ್ಲಿನ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ವಿಶ್ವ ಆರೋಗ್ಯ ದಿನಾಚರಣೆ–2026ರ ಅಂಗವಾಗಿ ಆಯೋಜಿಸಿದ್ದ ‘ನಿತ್ಯ ಬದುಕಿನಲ್ಲಿ ಯೋಗ–ಧ್ಯಾನ–ಪ್ರಾಣಾಯಾಮಗಳ ಮಹತ್ವ’ ಕುರಿತ ಪ್ರಾತ್ಯಕ್ಷಿಕೆ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪ್ರತಿದಿನ ಸ್ವಲ್ಪ ಸಮಯವನ್ನು ಯೋಗ ಮತ್ತು ಧ್ಯಾನಕ್ಕೆ ಮೀಸಲಿಟ್ಟು ಅಭ್ಯಾಸ ಮಾಡಿದರೆ ದೇಹದ



ಆರೋಗ್ಯದ ಜೊತೆಗೆ ಮನಸ್ಸಿನ ಶಾಂತಿ ಹಾಗೂ ಸಂತೋಷವನ್ನು ಪಡೆಯಬಹುದು ಎಂದು ಅವರು ತಿಳಿಸಿದರು. ಎನ್.ಎಸ್.ಎಸ್. ಸಂಯೋಜಕ ಹಾಗೂ ಇತಿಹಾಸ ಪ್ರಾಧ್ಯಾಪಕ ಡಾ. ಅಪ್ಪಣ್ಣ ಹಂಜೆ ಪ್ರಾಸ್ತಾವಿಕವಾಗಿ ಮಾತನಾಡಿ, ಯೋಗ–ಧ್ಯಾನ–ಪ್ರಾಣಾಯಾಮಗಳು ಭಾರತದ ಪ್ರಾಚೀನ ಪರಂಪರೆಯಾಗಿದ್ದು, ಇವುಗಳು ಜಾಗತಿಕ ಮಟ್ಟದಲ್ಲಿ ಪ್ರಸಿದ್ಧಿ ಪಡೆದಿವೆ. ಓದು, ಮನಸ್ಸಿನ ಸ್ಥೈರ್ಯ ಮತ್ತು ವ್ಯಕ್ತಿತ್ವ ಅಭಿವೃದ್ಧಿಗೆ ಅವುಗಳು ಸಹಕಾರಿಯಾಗಿವೆ ಎಂದರು. ಡಾ. ಲಕ್ಷ್ಮಣ ಮುಳಗುಂದ, ಡಾ. ನೇಮಾನಿ ಸತೀಶ, ಬಸವರಾಜ ಬಳಗಾನೂರಮಠ, ಡಾ. ಸಾರಿಕಾ ಪಾಟೀಲ, ಶ್ವೇತಾ ಪಾಲನಕರ, ಮಹಾಂತೇಶ ಹಾಗೂ ಡಾ. ಮಂಜುನಾಥ ತ್ಯಾಲಗಡಿ ಅವರು ವಿದ್ಯಾರ್ಥಿ ಜೀವನದಲ್ಲಿ ಯೋಗ–ಧ್ಯಾನ–ಪ್ರಾಣಾಯಾಮಗಳ ಮಹತ್ವ ಕುರಿತು ಮಾತನಾಡಿದರು. ಕಾರ್ಯಕ್ರಮದ ಸಂಯೋಜಕಿ ಸಾವಿತ್ರಿ ಟಿ. ಕಾರ್ಯಕ್ರಮ ನಿರ್ವಹಿಸಿದರು. ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿದ್ದರು.


# ಕಳಪೆ ಸೌತೆ ಬೀಜದಿಂದ ರೈತನಿಗೆ ಲಕ್ಷಾಂತರ ನಷ್ಟ

**ಡಂಬಳದಲ್ಲಿ ಕಹಿ ಸೌತೆ ಬೆಳೆ; ಕಂಪನಿ ವಿರುದ್ಧ ಆಕ್ರೋಶ, ಪರಿಹಾರಕ್ಕೆ ಆಗ್ರಹ**



> "4 ಎಕರೆ 30 ಗುಂಟೆ ಜಮೀನಿನಲ್ಲಿ ಲಕ್ಷಾಂತರ ಸಾಲ ಮಾಡಿ ಸೌತೆ ಬೆಳೆದಿದ್ದೇನೆ. ಈಗ ಬೆಳೆ ಬಂದಾಗ ಅದು ಸಂಪೂರ್ಣ ವಿಷಸ್ವರೂಪದ ಕಹಿ ಸೌತೆ ಆಗಿದೆ. ಏನು ಮಾಡಬೇಕೆಂದು ತಿಳಿಯದೆ ಸಂಕಷ್ಟದಲ್ಲಿದ್ದೇನೆ. ಅಧಿಕಾರಿಗಳು ಪರಿಶೀಲನೆ ನಡೆಸಿ 5–6 ಲಕ್ಷ ಪರಿಹಾರ ಕೊಡಿಸಬೇಕು."
>
> – **ಅಸಗರಲಿ ಸರಕಾವಾಸ,** ರೈತ.

> "ರೈತ ಅಸಗರಲಿ ಲಕ್ಷಾಂತರ ಹಣ ಹೂಡಿ ಬೆಳೆ ಬೆಳೆದಿದ್ದರೂ ಸಂಪೂರ್ಣ ಬೆಳೆ ಹಾನಿಯಾಗಿದೆ. ಮಾರುಕಟ್ಟೆಯಲ್ಲಿ 5–6 ಲಕ್ಷ ಆದಾಯ ಬರುವ ಸಾಧ್ಯತೆ ಇತ್ತು. ಕಂಪನಿಯವರು ಪರಿಹಾರ ನೀಡದಿದ್ದರೆ ಅವರ ಪರವಾನಿಗೆ ರದ್ದುಪಡಿಸಬೇಕು. ಇಲ್ಲವಾದರೆ ರೈತ ಸಂಘಟನೆಗಳಿಂದ ಪ್ರತಿಭಟನೆ ನಡೆಸುತ್ತೇವೆ."
>
> – **ಲಕ್ಷ್ಮಣ ದೊಡ್ಡಮನಿ,** ಪ್ರಗತಿಪರ ರೈತ.





**■ವಿಜಯಸಾಕ್ಷಿ ಸುದ್ದಿ, ಡಂಬಳ**

ಸರಿಯಾಗಿ ಪರೀಕ್ಷಿಸದೆ ವಿತರಿಸಲಾದ ಸೌತೆ ಬೀಜದಿಂದ ರೈತನೊಬ್ಬರಿಗೆ ಲಕ್ಷಾಂತರ ರೂಪಾಯಿ ನಷ್ಟ ಸಂಭವಿಸಿರುವ ಘಟನೆ ಮುಂಡರಗಿ ತಾಲೂಕಿನ ಡಂಬಳ ಗ್ರಾಮದಲ್ಲಿ ಬೆಳಕಿಗೆ ಬಂದಿದೆ.

ಡಂಬಳ ಗ್ರಾಮದ ಮಮತಾಜ ಅವರ ಸರ್ವೆ ನಂ. 273 ರ 4 ಎಕರೆ 30 ಗುಂಟೆ ಜಮೀನನ್ನು ಗುತ್ತಿಗೆ ಪಡೆದಿದ್ದ ರೈತ ಅಸಗರಲಿ ಸರಕಾವಾಸ ಅವರು ಹುಬ್ಬಳ್ಳಿಯ ರೈತ ಸ್ನೇಹಿ ವಿತರಕರಾದ ಮಡಿಮನ್ ಕಾಂಪ್ಲೆಕ್ಸ್‌ನ ಅಂಗಡಿ ಸಂಖ್ಯೆ 12/18ಎ ಯಿಂದ ಆರ್.ಕೆ. ಸೀಡ್ಸ್ (ಗುಜರಾತ್) ಕಂಪನಿಯ "ಕಾಕರಿ ಸುಪ್ರೀಯಾ" ತಳಿಯ ಸೌತೆ ಬೀಜ, ಕೀಟನಾಶಕ ಮತ್ತು ಕೃಷಿ ಉಪಕರಣಗಳನ್ನು ಖರೀದಿಸಿ ಬಿತ್ತನೆ ಮಾಡಿದ್ದರು.

ಸುಮಾರು 45 ದಿನಗಳಲ್ಲಿನ ಬೆಳೆಯಾದ ಸೌತೆಕಾಯಿ ಫಲ ನೀಡಲು ಆರಂಭವಾಗುತ್ತಿದ್ದಂತೆಯೇ, ಪ್ರತಿಯೊಂದು ಬಳ್ಳಿಯಲ್ಲೂ ಬೆಳೆದ ಸೌತೆಕಾಯಿಗಳು ಸಂಪೂರ್ಣವಾಗಿ ಕಹಿ (ವಿಷಸ್ವರೂಪ) ಆಗಿರುವುದು ಕಂಡುಬಂದಿದೆ. ಪ್ರತಿ ಎಕರೆಗೆ 20 ಟನ್ ಉತ್ಪಾದನೆ ನೀಡುವ ಭರವಸೆ ನೀಡಿದ್ದ ಈ ತಳಿಯ ಬೀಜದಿಂದ ಬಂದ ಬೆಳೆ ಮಾರುಕಟ್ಟೆಗೆ ಯೋಗ್ಯವಾಗದ ಸ್ಥಿತಿ ನಿರ್ಮಾಣವಾಗಿದೆ.

ಉತ್ತಮ ಬೆಳೆ ನಿರೀಕ್ಷೆಯಲ್ಲಿ ಬೀಜ, ರಾಸಾಯನಿಕ ಗೊಬ್ಬರ ಮತ್ತು ಔಷಧಿಗಳಿಗಾಗಿ ಲಕ್ಷಾಂತರ ರೂಪಾಯಿ ಹೂಡಿಕೆ ಮಾಡಿದ್ದ ರೈತ ಅಸಗರಲಿ ಈಗ ಆರ್ಥಿಕ ಸಂಕಷ್ಟಕ್ಕೆ ಸಿಲುಕಿದ್ದಾರೆ. ಸಾಲ ಮಾಡಿ ಬೆಳೆದ ಬೆಳೆ ಸಂಪೂರ್ಣವಾಗಿ ಹಾನಿಗೊಳಗಾದ ಕಾರಣ, ಸಾಲ ತೀರಿಸಲು ಸಾಧ್ಯವಾಗದೆ ಸಂಕಷ್ಟದಲ್ಲಿದ್ದಾರೆ.

ರೈತ ಖರೀದಿಸಿದ ಬೀಜವು ಸರಿಯಾದ ಗುಣಮಟ್ಟ ಪರೀಕ್ಷೆ ಇಲ್ಲದೆ ವಿತರಿಸಲ್ಪಟ್ಟಿದೆ ಎಂಬ ಅನುಮಾನ ವ್ಯಕ್ತವಾಗಿದ್ದು, ಇದರಿಂದ ಸೌತೆಕಾಯಿಗಳು ವಿಷಸ್ವರೂಪಕ್ಕೆ ತಿರುಗಿ ಕಹಿಯಾಗಿವೆ ಎಂದು ರೈತ ಆರೋಪಿಸಿದ್ದಾರೆ.

ಈ ಹಿನ್ನೆಲೆಯಲ್ಲಿ ಸಂಬಂಧಿಸಿದ ಬೀಜ ಕಂಪನಿ ಅಧಿಕಾರಿಗಳು ತಕ್ಷಣ ರೈತನ ಹೊಲಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ, ರೈತನಿಗೆ ಸಂಭವಿಸಿದ 5ರಿಂದ 6 ಲಕ್ಷದವರೆಗೆ ನಷ್ಟಕ್ಕೆ ತಕ್ಕ ಪರಿಹಾರ ನೀಡಬೇಕು ಎಂದು ಆಗ್ರಹಿಸಲಾಗಿದೆ. ಜೊತೆಗೆ ತಹಸೀಲ್ದಾರ್ ಹಾಗೂ ತೋಟಗಾರಿಕೆ ಇಲಾಖೆ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಸೂಕ್ತ ನ್ಯಾಯ ಒದಗಿಸಬೇಕು ಎಂದು ರೈತ ಮನವಿ ಮಾಡಿದ್ದಾರೆ.

---

# ಆಧ್ಯಾತ್ಮದಿಂದ ಸೌಜನ್ಯ ಸಂಸ್ಕೃತಿ ಬೆಳವಣಿಗೆ

**ಮೋರಟಗಿಯಲ್ಲಿ ಶಿವಯೋಗಿ ಸಿದ್ಧರಾಮೇಶ್ವರ ದೇವಾಲಯ ಕಳಸಾರೋಹಣ ಧರ್ಮಜಾಗೃತಿ ಸಮಾರಂಭದಲ್ಲಿ ರಂಭಾಪುರಿ ಜಗದ್ಗುರುಗಳು**



**■ವಿಜಯಸಾಕ್ಷಿ ಸುದ್ದಿ, ಅಲಮೇಲ**

ಮನುಷ್ಯನಲ್ಲಿ ಆತ್ಮಬಲ ಬೆಳೆಸಲು ಆಧ್ಯಾತ್ಮದ ಹಸಿವು ಅಗತ್ಯವಾಗಿದ್ದು, ಧರ್ಮ ಮತ್ತು ಆಧ್ಯಾತ್ಮಿಕತೆ ಬದುಕಿಗೆ ಆಶಾಕಿರಣವಾಗಿವೆ ಎಂದು ಬಾಳೆಹೊನ್ನೂರು ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಅಭಿಪ್ರಾಯಪಟ್ಟರು.

ತಾಲೂಕಿನ ಮೋರಟಗಿಯಲ್ಲಿ ಶ್ರೀ ಸಿದ್ಧರಾಮೇಶ್ವರ ಮತ್ತು ಕಲ್ಪವೃಕ್ಷ ವಿದ್ಯಾಸಂಸ್ಥೆಯಿಂದ ನಿರ್ಮಿಸಲಾದ ಶಿವಯೋಗಿ ಸಿದ್ಧರಾಮೇಶ್ವರರ ನೂತನ ದೇವಾಲಯದ ಕಳಸಾರೋಹಣ ಅಂಗವಾಗಿ ನಡೆದ ಧರ್ಮಜಾಗೃತಿ ಸಮಾರಂಭದಲ್ಲಿ ಸಾನ್ನಿಧ್ಯ ವಹಿಸಿ ಅವರು ಆಶೀರ್ವಚನ ನೀಡಿದರು.

ಮಾನವ ಜೀವನದ ಉನ್ನತಿಗೆ ಸಂಸ್ಕೃತಿ ಮತ್ತು ಸದ್ಗುಣಗಳು ಅಗತ್ಯವಾಗಿದ್ದು, ಮಾನವತೆಯಿಂದ ದೈವತ್ವದ ಕಡೆಗೆ ಒಯ್ಯುವ ಮಾರ್ಗವೇ ಸಂಸ್ಕೃತಿ ಎಂದು ಹೇಳಿದರು. ಸುಖ-ದುಃಖಗಳ ಸಂಮಿಶ್ರಣವಾದ ಜೀವನದಲ್ಲಿ ಸತ್ಯ ಮತ್ತು ಶಾಂತಿ ಅವಶ್ಯಕವಾಗಿವೆ ಎಂದರು.

ವೀರಶೈವ ಧರ್ಮದಲ್ಲಿ ಶ್ರೀ ರೇಣುಕಾಚಾರ್ಯರು ಪ್ರತಿಪಾದಿಸಿದ ಮಾನವೀಯ ಮೌಲ್ಯಗಳು ಸಮಾಜಕ್ಕೆ ದಾರಿದೀಪವಾಗಿದ್ದು, ಶಿವಧರ್ಮದ ತತ್ವಗಳು ಜೀವನದ ಉನ್ನತಿಗೆ ಸಹಕಾರಿಯಾಗಿವೆ ಎಂದು ತಿಳಿಸಿದರು. ಶಿವಯೋಗಿ ಸಿದ್ಧರಾಮೇಶ್ವರರ ಶ್ರಮ, ಭಕ್ತಿ ಮತ್ತು ಧಾರ್ಮಿಕ-ಸಾಮಾಜಿಕ ಆದರ್ಶಗಳು ಸಮಾಜದ ಉಜ್ವಲ ಭವಿಷ್ಯಕ್ಕೆ ಪ್ರೇರಣೆಯಾಗಿವೆ ಎಂದರು.

ಸಾನ್ನಿಧ್ಯ ವಹಿಸಿದ ಉಜ್ಜಯಿನಿ ಸಿದ್ಧಲಿಂಗ ಜಗದ್ಗುರುಗಳು ಮಾತನಾಡಿ, ಮಾನವನಲ್ಲಿ ತಿಳಿದಿರುವುದಕ್ಕಿಂತ ತಿಳಿಯಬೇಕಾದದ್ದು ಹೆಚ್ಚಿನದು. ಬುದ್ಧಿ, ಮನಸ್ಸು ಮತ್ತು ಸದ್ವಿಚಾರಗಳು ಬೆಳೆಯುವಾಗ ಶ್ರೇಯಸ್ಸು ಸಾಧ್ಯವಾಗುತ್ತದೆ ಎಂದರು.

ಆಲಮೇಲ ಹಿರೇಮಠದ ಚಂದ್ರಶೇಖರ ಶಿವಾಚಾರ್ಯ ಸ್ವಾಮಿಗಳು ಮಾತನಾಡಿ, ಆತ್ಮವಿಶ್ವಾಸ, ನಿಶ್ಚಿತ ಗುರಿ ಮತ್ತು ಸಂಯಮ ಯಶಸ್ಸಿನ ಮೂಲ ಅಂಶಗಳಾಗಿವೆ ಎಂದರು.

ಅಖಿಲ ಭಾರತ ವೀರಶೈವ ಶಿವಾಚಾರ್ಯ ಸಂಸ್ಥೆಯ ಅಧ್ಯಕ್ಷರಾದ ಸಿಂದಗಿ ಸಾರಂಗಮಠದ ಡಾ. ಪ್ರಭು ಸಾರಂಗದೇವ ಶಿವಾಚಾರ್ಯ ಸ್ವಾಮಿಗಳು ಅಧ್ಯಕ್ಷತೆ ವಹಿಸಿ, ಶಿಕ್ಷಣದಿಂದ ಬುದ್ಧಿಶಕ್ತಿ ಮತ್ತು ಧರ್ಮದಿಂದ ಭಾವನೆಗಳ ಬೆಳವಣಿಗೆ ಸಾಧ್ಯವೆಂದು ಹೇಳಿದರು.

ಕಾರ್ಯಕ್ರಮದಲ್ಲಿ ಸಿದ್ರಾಮಪ್ಪ ಬಿರಾದಾರ, ಶಿವಶರಣಪ್ಪಗೌಡ ವಿ. ಬಿರಾದಾರ, ಸುಮಿತ್ರಾ ಬಿರಾದಾರ, ಸಂಗಮ್ಮ ಬಿರಾದಾರ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು. ಸಮಾರಂಭಕ್ಕೂ ಮುನ್ನ ಉಭಯ ಜಗದ್ಗುರುಗಳನ್ನು ವಾದ್ಯ ವೈಭವದೊಂದಿಗೆ ಭವ್ಯವಾಗಿ ಬರಮಾಡಿಕೊಳ್ಳಲಾಯಿತು. ಸಹಸ್ರಾರು ಭಕ್ತರು ಭಾಗವಹಿಸಿ ಆಶೀರ್ವಾದ ಪಡೆದರು.

---

# ಮಹಿಳೆಯರಿಗೆ ಒತ್ತಡರಹಿತ ಜೀವನಕ್ಕೆ ಯೋಗ ಅವಶ್ಯ

**ಬೆಟಗೇರಿಯಲ್ಲಿ ಯೋಗ ಸಪ್ತಾಹ ಉದ್ಘಾಟನೆ**



**■ವಿಜಯಸಾಕ್ಷಿ ಸುದ್ದಿ, ಬೆಟಗೇರಿ**

ಶಂಕರ ಶಿವಾಚಾರ್ಯ ಕುರುಹಿನಶೆಟ್ಟಿ ಸಮುದಾಯ ಭವನ ಟ್ರಸ್ಟ್ ಕಮಿಟಿ ಹಾಗೂ ಶಂಕರ ಶಿವಾಚಾರ್ಯ ಕುರುಹಿನಶೆಟ್ಟಿ ಮಹಿಳಾ ಸಂಘ, ಬೆಟಗೇರಿ ಇವರ ಸಹಯೋಗದಲ್ಲಿ ಶನಿವಾರ ಯೋಗ ಸಪ್ತಾಹ ಕಾರ್ಯಕ್ರಮಕ್ಕೆ ಚಾಲನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಿದ್ದ ಬಸವರಾಜ ತಿಮ್ಮಾಪೂರ ಅವರು ಯೋಗದ ಮಹತ್ವವನ್ನು ವಿವರಿಸಿ, ಯೋಗದಿಂದ ಹಲವು ರೋಗಗಳನ್ನು ನಿರ್ಮೂಲನೆ ಮಾಡಬಹುದು. ಯೋಗವು ಔಷಧರಹಿತ ಪರಿಣಾಮಕಾರಿ ಚಿಕಿತ್ಸೆಯಾಗಿದ್ದು, ಆರೋಗ್ಯಕರ ಜೀವನಕ್ಕೆ ಅತ್ಯಂತ ಅಗತ್ಯ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀಮತಿ ವಿಜಯಾ ಕಲ್ಮನಿ ಅವರು ಮಹಿಳೆಯರು ಒತ್ತಡರಹಿತ ಜೀವನ ನಡೆಸಲು ಯೋಗ ಪ್ರಮುಖ ಪಾತ್ರ ವಹಿಸುತ್ತದೆ ಎಂದು ತಿಳಿಸಿದರು. ಮಹಿಳಾ ಸಂಘದ ಪ್ರಧಾನ ಕಾರ್ಯದರ್ಶಿಯಾದ ಡಾ. ಸುವರ್ಣಾ ನಿಡಗುಂದಿ ಪ್ರಾಸ್ತಾವಿಕವಾಗಿ ಮಾತನಾಡಿದರು. ಪ್ರಾರ್ಥನಾ ಗೀತೆಯನ್ನು ಪ್ರೇರಣಾ ತಿಮ್ಮಾಪೂರ ಹಾಗೂ ಶ್ರೀಮತಿ ಸಾವಿತ್ರಿ ಬೆನಕನಾಳ ನೆರವೇರಿಸಿದರು. ಕಾರ್ಯಕ್ರಮದ ನಿರೂಪಣೆಯನ್ನು ಸಹಕಾರ್ಯದರ್ಶಿ ಶ್ರೀಮತಿ ಸುಧಾ ಅಣ್ಣಿಗೇರಿ ನಡೆಸಿದರು.

ಸತತ ಏಳು ದಿನಗಳ ಯೋಗ ಶಿಬಿರವನ್ನು ಶ್ರೀಮತಿ ರತ್ನಮಂಜರಿ ವಂಟಗುಡಿ ಅವರು ಸಂಘದ ಸದಸ್ಯರಿಗೆ ನಡೆಸಿಕೊಡಲಿದ್ದು, ಇದರ ಸದುಪಯೋಗ ಪಡೆದುಕೊಳ್ಳುವಂತೆ ಕರೆ ನೀಡಲಾಯಿತು.

ಉದ್ಘಾಟನಾ ಸಮಾರಂಭದಲ್ಲಿ ಮಹಿಳಾ ಸಂಘದ ಎಲ್ಲಾ ಸದಸ್ಯರು ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಿದರು.

---

# ಲಕ್ಷ್ಮೇಶ್ವರ ಅಗಡಿ ಪಿಯು ಕಾಲೇಜಿಗೆ 93% ಭರ್ಜರಿ ಫಲಿತಾಂಶ



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀಮತಿ ಕಮಲಾ ಮತ್ತು ಶ್ರೀ ವೆಂಕಪ್ಪ ಎಂ. ಅಗಡಿ ಪಿಯು ಕಾಲೇಜಿನ ದ್ವಿತೀಯ ಪಿಯುಸಿ ಪರೀಕ್ಷೆಯ ಫಲಿತಾಂಶ ಶೇ. 93 ರಷ್ಟು ಸಾಧನೆಯಾಗಿದೆ.

ವಿಜ್ಞಾನ ವಿಭಾಗದಲ್ಲಿ ವಿದ್ಯಾರ್ಥಿನಿ ಪೂಜಾ ಕುರಟ್ಟಿ ಅವರು ಶೇ. 97.5 ಅಂಕಗಳನ್ನು ಗಳಿಸಿ ಗದಗ ಜಿಲ್ಲೆಗೆ ತೃತೀಯ ಸ್ಥಾನ ಹಾಗೂ ಲಕ್ಷ್ಮೇಶ್ವರ ತಾಲೂಕಿಗೆ ಪ್ರಥಮ ಸ್ಥಾನ ಪಡೆದಿದ್ದಾರೆ. ಚಿನ್ಮಯಿ ಕುಸನೂರಮಠ (95%), ಮಧುಮತಿ ಉಳ್ಳಟ್ಟಿ (92%), ಗೀತಾ ಸ್ಥಾವರಮಠ (91%) ಹಾಗೂ ಅರ್ಪಿತಾ ಶರಸೂರಿ (90%) ಉತ್ತಮ ಸಾಧನೆ ಮಾಡಿದ್ದಾರೆ.

ವಾಣಿಜ್ಯ ವಿಭಾಗದಲ್ಲಿ ಕೀರ್ತಿ ಯತ್ನಳ್ಳಿ (92%), ಗೌರಿ ಪಾಟೀಲ (92%) ಮತ್ತು ರಶ್ಮಿ ಗೋಡಿ (90%) ಅಂಕಗಳನ್ನು ಪಡೆದು ಗಮನಾರ್ಹ ಸಾಧನೆ ತೋರಿದ್ದಾರೆ.

ಜೀವಶಾಸ್ತ್ರ, ಗಣಕವಿಜ್ಞಾನ, ಆಂಗ್ಲ, ಹಿಂದಿ, ಕನ್ನಡ, ಲೆಕ್ಕಶಾಸ್ತ್ರ, ವ್ಯವಹಾರ ಅಧ್ಯಯನ, ಸಂಖ್ಯಾಶಾಸ್ತ್ರ ಮತ್ತು ಇತಿಹಾಸ ವಿಷಯಗಳಲ್ಲಿ ಹಲವಾರು ವಿದ್ಯಾರ್ಥಿಗಳು ಶೇ. 100 ಅಂಕಗಳನ್ನು ಗಳಿಸಿರುವುದು ವಿಶೇಷ.

ಉತ್ತಮ ಸಾಧನೆ ಮಾಡಿದ ವಿದ್ಯಾರ್ಥಿ-ವಿದ್ಯಾರ್ಥಿನಿಯರಿಗೆ ಸಂಸ್ಥೆಯ ಅಧ್ಯಕ್ಷ ಹರ್ಷವರ್ಧನ ಅಗಡಿ ಹಾಗೂ ಕುಟುಂಬದವರು, ಆಡಳಿತ ಮಂಡಳಿ, ಪ್ರಾಚಾರ್ಯರು ಮತ್ತು ಉಪನ್ಯಾಸ ವರ್ಗ ಅಭಿನಂದನೆ ಸಲ್ಲಿಸಿದ್ದಾರೆ.

---

# ಡಬಾಲಿ ಪಿಯು ಕಾಲೇಜಿನ ವಿದ್ಯಾರ್ಥಿಗಳ ಅತ್ಯುತ್ತಮ ಫಲಿತಾಂಶ

**■ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಪಟ್ಟಣದ ಎಫ್‌ಎಂ ಡಬಾಲಿ ಪದವಿಪೂರ್ವ ಮಹಾವಿದ್ಯಾಲಯದ 2026ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಯಲ್ಲಿ ವಿದ್ಯಾರ್ಥಿಗಳು ಅತ್ಯುತ್ತಮ ಪಲಿತಾಂಶ ನೀಡುವ ಮೂಲಕ ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ.

ಶಿರಹಟ್ಟಿ ಪಟ್ಟಣದ ಕುಮಾರಿ ನಫೀಸಾ ಡಾಲಾಯತ್ ವಿದ್ಯಾರ್ಥಿನಿಯು ಶೇಕಡ 92.33 ಪಲಿತಾಂಶ ಪಡೆಯುವ ಮೂಲಕ ಕಾಲೇಜಿಗೆ ಪ್ರಥಮ ಸ್ಥಾನ ಪಡೆದಿದ್ದಾಳೆ. ಕುಮಾರಿ ಸುಜಾತಾ ಆದಿ ಶೇಕಡ 91.5 ಪಲಿತಾಂಶ ಪಡೆದು ದ್ವಿತೀಯ ಸ್ಥಾನ ಪಡೆದಿದ್ದಾಳೆ. ಮಜ್ಜೂರ ಗ್ರಾಮದ ಕುಮಾರಿ ಸುಮಿತ್ರ ವೆಂಕಟಾಪುರ್ ಶೇಕಡ 89.50 ಅಂಕಗಳನ್ನು ಪಡೆಯುವ ಮೂಲಕ ಕಾಲೇಜಿಗೆ ತೃತೀಯ ಸ್ಥಾನ ಪಡೆದಿದ್ದಾಳೆ. ಕುಮಾರಿ ಕಿರಣ್ ಭಾನು ಮಲ್ಲಾಡದ ಶೇಕಡ 89.16, ಕುಮಾರಿ ಶಬಾನ ಡಾಲಾಯತ್ ಶೇಕಡ 88.83 ಹಾಗೂ ಕುಮಾರಿ ರೇಖಾ ಹರ್ತಿ ಶೇಕಡ 86.83 ಫಲಿತಾಂಶ ಪಡೆಯುವ ಮೂಲಕ ಕಾಲೇಜಿನ ಕೀರ್ತಿ ಹೆಚ್ಚಿಸಿದ್ದಾರೆ.

ಎಲ್ಲ ವಿದ್ಯಾರ್ಥಿನಿಯರಿಗೆ ಸಂಸ್ಥೆಯ ಆಡಳಿತ ಮಂಡಳಿಯ ಚೇರ್ಮನ್ನರಾದ ಜ್ಞಾನದೇವ ಡಬಾಲಿ, ಆಡಳಿತ ಮಂಡಳಿಯ ಸದಸ್ಯರಾದ ಗಿರೀಶ್ ಡಬಾಲಿ, ಡಾ ಸುರೇಶ್ ಡಬಾಲಿ, ಶಿವನಗೌಡ ಪಾಟೀಲ್, ವಿ ವಿ ಅಮರ್ ಶೆಟ್ಟಿ, ಕಾರ್ಯದರ್ಶಿಗಳಾದ ಎನ್ ಆರ್ ಕುಲಕರ್ಣಿ, ಆಡಳಿತ ಅಧಿಕಾರಿಗಳಾದ ಐ ಬಿ ಬೆನಕೊಪ್ಪ ಹಾಗೂ ಆಡಳಿತ ಮಂಡಳಿಯ ಸರ್ವ ಸದಸ್ಯರು ಅಭಿನಂದಿಸಿದ್ದಾರೆ. ಕಾಲೇಜಿನ ಪ್ರಾಚಾರ್ಯರಾದ ಎಮ್ ಸಿ ಭಜಂತ್ರಿ, ಉಪನ್ಯಾಸಕರಾದ ಎನ್ ಹನುಮರಡ್ಡಿ, ವಾಯ್ ಎಸ್ ಪಂಗಣ್ಣವರ್, ಶ್ರೀಮತಿ ಸುಧಾ ಹುಚ್ಚಣ್ಣವರ, ಪಿಎನ್ ಕುಲಕರ್ಣಿ,ಎಂ ಎಂ ನದಾಫ್, ಬಸವರಾಜ್ ಸಿರುಂದ್, ಪಿ ವಿ ಹೊಸೂರ್ ಮುಂತಾದವರು ಅತ್ಯುತ್ತಮ ಫಲಿತಾಂಶ ನೀಡಿದ ವಿದ್ಯಾರ್ಥಿಗಳನ್ನು ಅಭಿನಂದಿಸಿದ್ದಾರೆ.



---

# ವಿದ್ಯಾಪೋಷಕದ ವಿದ್ಯಾರ್ಥಿಗಳಿಂದ ಪಿಯುಸಿಯಲ್ಲಿ ಭರ್ಜರಿ ಸಾಧನೆ



**■ವಿಜಯಸಾಕ್ಷಿ ಸುದ್ದಿ, ಧಾರವಾಡ**

ಧಾರವಾಡದ ವಿದ್ಯಾಪೋಷಕ ಸಂಸ್ಥೆ 2025-26ನೇ ಶೈಕ್ಷಣಿಕ ಸಾಲಿನಲ್ಲಿ ದ್ವಿತೀಯ ಪಿಯುಸಿ ಅಭ್ಯಾಸ ಮಾಡುತ್ತಿರುವ ಧಾರವಾಡ ಹಾಗೂ ಗದಗ ಜಿಲ್ಲೆಯ ಬಡ ಮತ್ತು ಕಾರ್ಮಿಕ ಕುಟುಂಬಗಳ ವಿದ್ಯಾರ್ಥಿಗಳಿಗೆ ಧನಸಹಾಯ, ಪುಸ್ತಕ ವಿತರಣೆ ಹಾಗೂ ತರಬೇತಿ ಶಿಬಿರಗಳ ಮೂಲಕ ಮಾರ್ಗದರ್ಶನ ನೀಡಿದ್ದು, ಇದರ ಫಲವಾಗಿ ವಿದ್ಯಾರ್ಥಿಗಳು ಗಮನಾರ್ಹ ಸಾಧನೆ ಮಾಡಿದ್ದಾರೆ.

ಕೃಷಿಕಾರ್ಮಿಕರು, ಮನೆಗೆಲಸ, ಕ್ಷೌರಿಕ, ಕಟ್ಟಡ ಕೆಲಸ, ಬಡಿಗತನ, ಕಮ್ಮಾರಿಕೆ, ಟೈಲರಿಂಗ್ ಮುಂತಾದ ವೃತ್ತಿಗಳಲ್ಲಿ ತೊಡಗಿರುವ ಕುಟುಂಬಗಳಿಂದ ಬಂದ ವಿದ್ಯಾರ್ಥಿಗಳ ಪೈಕಿ ಒಟ್ಟು 19 ಪ್ರತಿಭೆಗಳು ದ್ವಿತೀಯ ಪಿಯುಸಿಯಲ್ಲಿ ಶೇ. 90 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದು ಸಾಧನೆಗೈದಿದ್ದಾರೆ.

ಅನು ಜಾಧವ್ (96.5% – ವಾಣಿಜ್ಯ), ಶಾರದ ನೆಣಕ್ಕಿ (95.83% – ವಾಣಿಜ್ಯ), ಭವಾನಿ ರಡ್ಡೆರ್ (95.16% – ವಿಜ್ಞಾನ), ದೀಕ್ಷಿತಾ ಅಂಚಟಗೇರಿ (95.16% – ವಾಣಿಜ್ಯ), ಸಾಕ್ಷಿ ಬಡಿಗನ್ನವರ (95.16% – ವಾಣಿಜ್ಯ), ಸುಮಾ ಗರಗ (95.3% – ವಿಜ್ಞಾನ), ಚಂದನಾ ಪಾಟೀಲ್ (94.6% – ವಿಜ್ಞಾನ), ಮೇಘಾ ಚಿಕ್ಕನಗೌಡ್ರ (94.3% – ವಿಜ್ಞಾನ), ಆಕಾಶ ಜುಲ್ಪಿ (93.8% – ವಾಣಿಜ್ಯ), ಚನ್ನಮ್ಮ ಸಂದಿಮನಿ (93.3% – ವಾಣಿಜ್ಯ), ಪ್ರಣೀತ್ ಕಲಘಟಗಿ (92.16% – ವಿಜ್ಞಾನ), ಸೌಜನ್ಯ ತುರುಮರಿ (90.6% – ವಿಜ್ಞಾನ), ರುಚಿತಾ ಶಿಲಾರೆ (90% – ವಿಜ್ಞಾನ), ಅದಿತಿ ದೇಶಪಾಂಡೆ (91.5% – ವಿಜ್ಞಾನ), ಪಲ್ಲವಿ ಕುಂಬಾರ್ (90.16% – ವಿಜ್ಞಾನ), ಭಾವನಾ ಬಡಗರು (92.16% – ವಿಜ್ಞಾನ), ಅಮೋಘಾ ಹಿರೇಮಠ (90.6% – ವಿಜ್ಞಾನ), ಸೌಮ್ಯ ಪಾಟೀಲ್ (94.5% – ವಾಣಿಜ್ಯ), ಬಸವಣ್ಣೆವ್ವ ಉಪ್ಪಾರ್ (92.6% – ವಾಣಿಜ್ಯ) ಅವರು ಈ ಸಾಧನೆಗೈದ ವಿದ್ಯಾರ್ಥಿಗಳಾಗಿದ್ದಾರೆ.

ವಿದ್ಯಾಪೋಷಕ ಸಂಸ್ಥೆ ಎಲ್ಲ ಸಾಧಕ ವಿದ್ಯಾರ್ಥಿಗಳಿಗೆ ಅಭಿನಂದನೆ ಸಲ್ಲಿಸಿ, ಅವರ ಮುಂದಿನ ಭವಿಷ್ಯಕ್ಕಾಗಿ ಶುಭ ಹಾರೈಸಿದೆ.

---

# ಅರ್ಹ ಫಲಾನುಭವಿಗಳಿಗೆ ವಸತಿ ಕಲ್ಪಿಸಿ

▸▸ ಮೊದಲನೇ ಪುಟದಿಂದ

ಪರಿಹರಿಸಲಾಗುವುದು ಹಾಗೂ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿ ಶೀಘ್ರದಲ್ಲೇ ಸಭೆ ನಡೆಸಲಾಗುವುದು ಎಂದು ಭರವಸೆ ನೀಡಿದ್ದಾರೆ.

ಈ ಸಂದರ್ಭದಲ್ಲಿ ಜಿಲ್ಲಾ ಮಹಿಳಾ ಸಮಿತಿ ಅಧ್ಯಕ್ಷರಾದ ಪರವೀನಬಾನು ಹವಾಲ್ದಾರ, ಮುಖಂಡರಾದ ಇಬ್ರಾಹಿಂ ಮುಲ್ಲಾ, ಮೌಲಾಸಾಬ ಗಚ್ಚಿ, ಶರಣಪ್ಪ ಸೂಡಿ, ಪುಷ್ಪಾ ಬಿಜಾಪೂರ, ರವಿ ಗೋಸಾವಿ, ಮೆಹಬೂಬಸಾಬ ಬಳ್ಳಾರಿ, ಜಂದಿಸಾಬ ಢಾಲಾಯತ, ಅಫ್ರೋಜಾ ನಾಗನೂರ, ಮುನ್ನಾ ಅಗಡಿ, ಮೌಲಾಸಾಬ ಮುಜಾವರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಏ. 16ರಂದು ನೇರ ಸಂದರ್ಶನ

■ ವಿಜಯಸಾಕ್ಷಿ ಸುದ್ದಿ, ಗದಗ

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಗದಗ ವತಿಯಿಂದ ಎಪ್ರಿಲ್ 16ರಂದು ನೇರ ಸಂದರ್ಶನವನ್ನು ಹಮ್ಮಿಕೊಳ್ಳಲಾಗಿದೆ.

ಗುರುವಾರ ಬೆಳಿಗ್ಗೆ 10 ಗಂಟೆಗೆ ವಿವೇಕಾನಂದ ನಗರ, 4ನೇ ಅಡ್ಡ ರಸ್ತೆ, ಸಾಯಿ ಬಾಬಾ ದೇವಸ್ಥಾನದ ಹಿಂಭಾಗ, ಕೆ.ಎಚ್.ಬಿ ಕಾಲೋನಿ, ಗದಗ ಇಲ್ಲಿ ಸಂದರ್ಶನ ನಡೆಯಲಿದೆ.

ಈ ನೇರ ಸಂದರ್ಶನದಲ್ಲಿ ಸ್ವತಂತ್ರ ಮೈಕ್ರೋಫಿನ್ ಪ್ರೈವೇಟ್ ಲಿಮಿಟೆಡ್, ಗದಗ ಸಂಸ್ಥೆ ಭಾಗವಹಿಸಲಿದ್ದು, ಎಸ್‌ಎಸ್‌ಎಲ್‌ಸಿ, ಪಿಯುಸಿ, ಐಟಿಐ ಹಾಗೂ ಯಾವುದೇ ಪದವಿ ಪಡೆದ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದು. ಫೀಲ್ಡ್ ವರ್ಕ್ ಹುದ್ದೆಗೆ ಪುರುಷ ಮತ್ತು ಮಹಿಳಾ ಅಭ್ಯರ್ಥಿಗಳು ಅರ್ಹರಾಗಿದ್ದು, ವಯೋಮಿತಿ 18ರಿಂದ 28 ವರ್ಷಗಳೊಳಗಿರಬೇಕು.

ಆಯ್ಕೆಯಾದ ಅಭ್ಯರ್ಥಿಗಳಿಗೆ ಶಿರಹಟ್ಟಿ, ಮುಂಡರಗಿ, ಗದಗ ಮತ್ತು ಅಣ್ಣಿಗೇರಿ ಪ್ರದೇಶಗಳಲ್ಲಿ ಕೆಲಸ ಮಾಡಲು ಅವಕಾಶ ಇರುತ್ತದೆ.

ನೇರ ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತಾ ಅಂಕಪಟ್ಟಿಗಳ ಝೆರಾಕ್ಸ್ ಪ್ರತಿಗಳು, ಎರಡು ಜೀವನಚರಿತ್ರೆ (ಬಯೋಡಾಟಾ) ಪ್ರತಿಗಳು ಹಾಗೂ ಆಧಾರ್ ಕಾರ್ಡ್ ಝೆರಾಕ್ಸ್ ಪ್ರತಿಯನ್ನು ತರಬೇಕು.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳಿಗೆ ನೋಂದಣಿ ಕಡ್ಡಾಯವಾಗಿರುತ್ತದೆ. ಯುವನಿಧಿ ಯೋಜನೆಯ ಫಲಾನುಭವಿಗಳು ಈ ಸಂದರ್ಶನದಲ್ಲಿ ಕಡ್ಡಾಯವಾಗಿ ಪಾಲ್ಗೊಳ್ಳಬೇಕೆಂದು ಕೋರಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 8951460061 ಹಾಗೂ 6363330688 ಸಂಪರ್ಕಿಸಬಹುದಾಗಿದೆ ಎಂದು ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ರಸ್ತೆ ಸುರಕ್ಷತಾ ನಿಯಮ ಉಲ್ಲಂಘನೆಗೆ ಕಟ್ಟುನಿಟ್ಟಿನ ಕ್ರಮ: ಅಪ್ರಾಪ್ತರಿಗೆ ವಾಹನ ನೀಡಿದರೆ ಭಾರಿ ದಂಡ-ವಿಕಾಸ ಪಿ ಲಮಾಣಿ**

# ಹೆಲ್ಮೆಟ್ ಧರಿಸುವುದು ಕಡ್ಡಾಯ

■ ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ

ಬೈಕ್ ಸವಾರಿ ಮಾಡುವ ಪ್ರತಿಯೊಬ್ಬರೂ ಕಡ್ಡಾಯವಾಗಿ ಹೆಲ್ಮೆಟ್ ಧರಿಸಬೇಕು ಎಂದು ವೃತ್ತ ನಿರೀಕ್ಷಕರಾದ ವಿಕಾಸ ಪಿ ಲಮಾಣಿ ತಿಳಿಸಿದ್ದಾರೆ.

ನಗರದ ಹೊಸಪೇಟೆ–ಹರಿಹರ ರಸ್ತೆ ಮಾರ್ಗದಲ್ಲಿ ಮುಖ್ಯ ರಸ್ತೆಯಲ್ಲಿ ಹೆಲ್ಮೆಟ್ ಧರಿಸದೆ ಸಂಚರಿಸುತ್ತಿದ್ದ ಬೈಕ್ ಸವಾರರನ್ನು ತಡೆದು ಜಾಗೃತಿ ಮೂಡಿಸಿದ ಅವರು, ರಸ್ತೆ ಸುರಕ್ಷತಾ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚಿಸಿದರು.

ಈ ವೇಳೆ ಮಾತನಾಡಿದ ಅವರು, ಮನುಷ್ಯನ ದೇಹದಲ್ಲಿ ಅತಿ ಸೂಕ್ಷ್ಮವಾದ ಅಂಗ ತಲೆ ಎಂದು ಹೇಳಿ, ಬೈಕ್ ಸವಾರಿ ವೇಳೆ ಸಂಭವಿಸುವ ಅಪಘಾತಗಳು ಕೇವಲ ಜೀವವನ್ನಷ್ಟೇ ಅಲ್ಲದೆ ಕುಟುಂಬದ ನೆಮ್ಮದಿಯನ್ನೂ ಹಾಳು ಮಾಡುತ್ತವೆ ಎಂದು ತಿಳಿಸಿದರು. ಆದ್ದರಿಂದ ಪ್ರತಿಯೊಬ್ಬರೂ ಹೆಲ್ಮೆಟ್ ಧರಿಸುವುದು ಅತ್ಯಂತ ಅಗತ್ಯವೆಂದು ಹೇಳಿದರು.

ಪೋಷಕರು ಅಪ್ರಾಪ್ತ ವಯಸ್ಸಿನ ಮಕ್ಕಳಿಗೆ ವಾಹನ ನೀಡಬಾರದು. ಕಾನೂನುಬಾಹಿರವಾಗಿ ಅಪ್ರಾಪ್ತರು ವಾಹನ ಚಲಾಯಿಸುತ್ತಿರುವುದು ಪತ್ತೆಯಾದರೆ ಭಾರಿ ದಂಡ ವಿಧಿಸಲಾಗುವುದು ಎಂದು ಹೇಳಿದರು.



ಪೊಲೀಸ್ ಉಪ ನಿರೀಕ್ಷಕರಾದ ಬಸವರಾಜ್ ಅಡವಿಬಾವಿ ಮಾತನಾಡಿ, ಸಾರ್ವಜನಿಕರ ಜೀವ ಭದ್ರತೆ ನಮ್ಮ ಪ್ರಮುಖ ಗುರಿಯಾಗಿದೆ ಎಂದು ತಿಳಿಸಿದರು. ಸಂಚಾರ ನಿಯಮ ಉಲ್ಲಂಘನೆ ಜೀವಕ್ಕೆ ಅಪಾಯಕಾರಿಯಾಗಿದೆ. ಪ್ರತಿಯೊಬ್ಬರೂ ಹೆಲ್ಮೆಟ್ ಧರಿಸುವುದು, ವೇಗ ನಿಯಂತ್ರಿಸುವುದು ಹಾಗೂ ರಸ್ತೆ ನಿಯಮಗಳನ್ನು ಪಾಲಿಸುವುದು ಅಗತ್ಯವೆಂದು ಹೇಳಿದರು.

ಸಂಚಾರ ನಿಯಮ ಉಲ್ಲಂಘನೆ ವಿರುದ್ಧ ಕ್ರಮ ಕೈಗೊಳ್ಳುವುದರ ಜೊತೆಗೆ ಜನರಲ್ಲಿ ಜಾಗೃತಿ ಮೂಡಿಸಲು ಪೊಲೀಸರು ನಿರಂತರವಾಗಿ ಕಾರ್ಯಾಚರಣೆಗಳನ್ನು ನಡೆಸುತ್ತಿದ್ದಾರೆ.

ಸಾರ್ವಜನಿಕರ ಸಹಕಾರದಿಂದ ಮಾತ್ರ ಅಪಘಾತಗಳನ್ನು ಕಡಿಮೆ ಮಾಡಬಹುದು ಎಂದು ಅವರು ಹೇಳಿದರು.

ಈ ಸಂದರ್ಭದಲ್ಲಿ ಸಹಾಯಕ ಉಪ ನಿರೀಕ್ಷಕರಾದ ಉಮಾಪತಿ ನಾಯ್ಕ, ಸಿಬ್ಬಂದಿಗಳಾದ ಕೆ.ಎಚ್. ಚಿದಾನಂದ, ಎಸ್.ಪಿ. ಕಾನ್ಸ್‌ಟೇಬಲ್ ಹನುಮಂತಪ್ಪ, ಪರಶುರಾಮ್, ಯಮನಪ್ಪ ಬಂಡೆ, ಸಿದ್ದೇಶ್, ಜಯರಾಮ್ ಹಾಗೂ ಯುವಕರಾದ ಫಣಿರಾಜ್, ಹಂಚಿನ ಮನೆ ರಮೇಶ್, ನಾಗರಾಜ್ ಸೇರಿದಂತೆ ಸಾರ್ವಜನಿಕರು ಉಪಸ್ಥಿತರಿದ್ದರು.

> ನಾವು ಎಷ್ಟು ಎಚ್ಚರಿಕೆಯಿಂದ ವಾಹನ ಚಲಾಯಿಸಿದರೂ ಆಕಸ್ಮಿಕ ಅಪಘಾತಗಳು ಸಂಭವಿಸಬಹುದು. ಹೇರ್‌ಸ್ಟೈಲ್ ಹಾಳಾಗುತ್ತದೆ ಎಂಬ ಕಾರಣಕ್ಕೆ ಹೆಲ್ಮೆಟ್ ಧರಿಸದೇ ಇದ್ದರೆ ಅನಾಹುತ ತಪ್ಪುವುದಿಲ್ಲ.
>
> – **ವಿಕಾಸ ಪಿ ಲಮಾಣಿ,** ಸಿಪಿಐ.

**ಎಸ್‌ಎಸ್‌ಎಲ್‌ಸಿ, ಐಟಿಐ, ಪಿಯುಸಿ ವಿದ್ಯಾರ್ಥಿಗಳಿಗೆ ಪ್ರವೇಶ ಆರಂಭ**

# ಜಿ-ಎನ್‌ಟಿಟಿಎಫ್‌ನಲ್ಲಿ ತಾಂತ್ರಿಕ ಶಿಕ್ಷಣಕ್ಕೆ ಅವಕಾಶ

G-NTTF®
Securing your Future with your own Hands

■ ವಿಜಯಸಾಕ್ಷಿ ಸುದ್ದಿ, ಗದಗ

ಎಸ್‌ಎಸ್‌ಎಲ್‌ಸಿ, ಐಟಿಐ ಹಾಗೂ ಪಿಯುಸಿ ಉತ್ತೀರ್ಣ ವಿದ್ಯಾರ್ಥಿಗಳ ಭವಿಷ್ಯ ರೂಪಿಸಿಕೊಳ್ಳಲು ಗದಗದ ಪ್ರತಿಷ್ಠಿತ ಜಿ-ಎನ್‌ಟಿಟಿಎಫ್ ತಾಂತ್ರಿಕ ವಿದ್ಯಾಲಯ ಮಹತ್ವದ ಪಾತ್ರ ವಹಿಸುತ್ತಿದೆ.

ಗದಗ ಜಿಲ್ಲೆ ಭೌಗೋಳಿಕವಾಗಿ ಐದು ಜಿಲ್ಲೆಗಳ ಮಧ್ಯದಲ್ಲಿ ಪ್ರಮುಖ ಸ್ಥಾನ ಪಡೆದಿದೆ. ಪೂರ್ವಕ್ಕೆ ಬೀಜ ಉತ್ಪಾದನೆಯಲ್ಲಿ ಪ್ರಸಿದ್ಧ ಕೊಪ್ಪಳ ಜಿಲ್ಲೆ, ಪಶ್ಚಿಮಕ್ಕೆ ಪೇಡಾ ನಗರ ಧಾರವಾಡ, ದಕ್ಷಿಣಕ್ಕೆ ಬ್ಯಾಡಗಿ ಕೆಂಪು ಮೆಣಸಿನಕಾಯಿ ಖ್ಯಾತಿಯ ಹಾವೇರಿ, ಖನಿಜ ಸಂಪತ್ತಿನಿಂದ ಕೂಡಿದ ಬಳ್ಳಾರಿ ಹಾಗೂ ಉತ್ತರಕ್ಕೆ ಯುನೆಸ್ಕೋ ವಿಶ್ವ ಪರಂಪರೆಯ ತಾಣಗಳಾದ ಬಾದಾಮಿ, ಐಹೊಳೆ ಮತ್ತು ಪಟ್ಟದಕಲ್ಲುಗಳನ್ನು ಹೊಂದಿರುವ ಬಾಗಲಕೋಟೆ ಜಿಲ್ಲೆಗಳ ನಡುವೆ ಗದಗ ವಿಶಿಷ್ಟ ಸ್ಥಾನ ಪಡೆದಿದೆ. ಹಿಂದುಸ್ತಾನಿ ಸಂಗೀತಕ್ಕೂ ಗದಗ ಪ್ರಸಿದ್ಧವಾಗಿದೆ.

ಸುಮಾರು ಆರೂವರೆ ದಶಕಗಳಿಂದ ಕಾರ್ಯ ನಿರ್ವಹಿಸುತ್ತಿರುವ ಜಿ-ಎನ್‌ಟಿಟಿಎಫ್ ವಿದ್ಯಾಲಯವು ಅಂತಾರಾಷ್ಟ್ರೀಯ ಮಟ್ಟದ ತಾಂತ್ರಿಕ ಶಿಕ್ಷಣವನ್ನು ನೀಡುತ್ತಿದೆ. ಆಧುನಿಕ ಉದ್ಯಮಗಳಿಗೆ ಅಗತ್ಯವಾದ ಸೂಕ್ಷ್ಮ ಹಾಗೂ ಪ್ರಾಯೋಗಿಕ ತಾಂತ್ರಿಕ ಕೌಶಲ್ಯಗಳನ್ನು ಪಠ್ಯಕ್ರಮದಲ್ಲಿ ಅಳವಡಿಸಿಕೊಂಡಿರುವುದರಿಂದ ಇಲ್ಲಿಂದ ತೇರ್ಗಡೆಯಾದ ವಿದ್ಯಾರ್ಥಿಗಳಿಗೆ ರಾಜ್ಯ, ದೇಶ ಮತ್ತು ವಿದೇಶಗಳಲ್ಲಿ ಉತ್ತಮ ಉದ್ಯೋಗಾವಕಾಶಗಳು ಲಭಿಸುತ್ತಿವೆ.

ವಿದ್ಯಾರ್ಥಿಗಳು ಪ್ರಮುಖ ತಾಂತ್ರಿಕ ಸಂಸ್ಥೆಗಳಲ್ಲಿ ಉದ್ಯೋಗ ಪಡೆಯುವುದರ ಜೊತೆಗೆ ಹಲವರು ಸ್ವಂತ ಉದ್ಯಮಗಳನ್ನು ಸ್ಥಾಪಿಸಿ ಉದ್ಯಮಿಗಳಾಗುತ್ತಿದ್ದಾರೆ.

ಪ್ರಸ್ತುತ 2026ನೇ ಸಾಲಿನ ತರಗತಿಗಳಿಗೆ ಪ್ರವೇಶ ಪ್ರಕ್ರಿಯೆ ಆರಂಭವಾಗಿದ್ದು, ಈ ಅವಕಾಶವನ್ನು ಎಸ್‌ಎಸ್‌ಎಲ್‌ಸಿ, ಐಟಿಐ ಹಾಗೂ ಪಿಯುಸಿ ವಿದ್ಯಾರ್ಥಿಗಳು ಸದುಪಯೋಗ ಪಡಿಸಿಕೊಳ್ಳಬೇಕೆಂದು ಕಾಲೇಜಿನ ಪ್ರಾಂಶುಪಾಲರು ತಿಳಿಸಿದ್ದಾರೆ. ಎಸ್‌ಎಸ್‌ಎಲ್‌ಸಿ, ಐಟಿಐ ಮತ್ತು ಪಿಯುಸಿ ಉತ್ತೀರ್ಣಗೊಂಡ 24 ವರ್ಷ ವಯಸ್ಸಿನೊಳಗಿನ ವಿದ್ಯಾರ್ಥಿಗಳು ಪ್ರವೇಶ ಪರೀಕ್ಷೆಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಅಧಿಕೃತ ಜಾಲತಾಣವನ್ನು ಸಂಪರ್ಕಿಸಬಹುದು ಅಥವಾ ಮೊಬೈಲ್ ಸಂಖ್ಯೆ 9740565201 ಅನ್ನು ಸಂಪರ್ಕಿಸಬಹುದಾಗಿದೆ ಎಂದು ಪ್ರಕಟಣೆ ತಿಳಿಸಿದೆ.

**ರೈತರ ಮಕ್ಕಳಿಗೆ 10 ತಿಂಗಳ ಉಚಿತ ತರಬೇತಿ ಅವಕಾಶ**

# ತೋಟಗಾರಿಕೆ ತರಬೇತಿಗೆ ಅರ್ಜಿ ಆಹ್ವಾನ

■ ವಿಜಯಸಾಕ್ಷಿ ಸುದ್ದಿ, ಗದಗ

ರೈತರ ಮಕ್ಕಳಿಗಾಗಿ 2026 ಮೇ 2ರಿಂದ 2027 ಫೆಬ್ರವರಿ 28ರವರೆಗೆ 10 ತಿಂಗಳ ತೋಟಗಾರಿಕೆ ತರಬೇತಿ ಹಮ್ಮಿಕೊಳ್ಳಲಾಗಿದ್ದು, ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಎಪ್ರಿಲ್ 20ರವರೆಗೆ ವಿತರಿಸಲಾಗುತ್ತದೆ. ಅರ್ಜಿ ಸಲ್ಲಿಸುವ ಕೊನೆಯ ದಿನವೂ ಎಪ್ರಿಲ್ 20 ಆಗಿದೆ. ಅಭ್ಯರ್ಥಿಗಳ ಸಂದರ್ಶನವನ್ನು ಎಪ್ರಿಲ್ 23ರಂದು ಬೆಳಿಗ್ಗೆ 11 ಗಂಟೆಗೆ ನಗರದ ಭೀಷ್ಮನ ಕೆರೆ ಹತ್ತಿರ ಇರುವ ತೋಟಗಾರಿಕೆ ಉಪನಿರ್ದೇಶಕರ ಕಚೇರಿಯಲ್ಲಿ ನಡೆಸಲಾಗುವುದು. ಅಭ್ಯರ್ಥಿಗಳು ಕನಿಷ್ಠ ಎಸ್‌ಎಸ್‌ಎಲ್‌ಸಿ ಉತ್ತೀರ್ಣರಾಗಿರಬೇಕು. ಅಭ್ಯರ್ಥಿಯ ತಂದೆ/ತಾಯಿ ಅಥವಾ ಪೋಷಕರು ಕಡ್ಡಾಯವಾಗಿ ಜಮೀನು ಹೊಂದಿರಬೇಕು. ಇದಕ್ಕೆ ಸಂಬಂಧಿಸಿದಂತೆ ಕಂದಾಯ ಇಲಾಖೆಯಿಂದ ದೃಢೀಕರಣ ಪತ್ರ ಸಲ್ಲಿಸಬೇಕು.

ವಯೋಮಿತಿ ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 33 ವರ್ಷವಾಗಿದ್ದು, ಇತರೆ ಅಭ್ಯರ್ಥಿಗಳಿಗೆ ಕನಿಷ್ಠ 18 ವರ್ಷ ಮತ್ತು ಗರಿಷ್ಠ 30 ವರ್ಷವಾಗಿರಬೇಕು.

ಅರ್ಜಿ ಶುಲ್ಕ ಸಾಮಾನ್ಯ ಅಭ್ಯರ್ಥಿಗಳಿಗೆ ರೂ. 30 ಹಾಗೂ ಪರಿಶಿಷ್ಟ ಜಾತಿ/ಪಂಗಡದ ಅಭ್ಯರ್ಥಿಗಳಿಗೆ ರೂ. 15 ಆಗಿರುತ್ತದೆ. ಈ ಮೊತ್ತವನ್ನು ಸಂಬಂಧಿತ ಜಿಲ್ಲೆಯ ತೋಟಗಾರಿಕೆ ಉಪನಿರ್ದೇಶಕರ (ಜಿಲ್ಲಾ ಪಂಚಾಯತ್) ಹೆಸರಿನಲ್ಲಿ ಪೋಸ್ಟಲ್ ಆರ್ಡರ್ ಅಥವಾ ಡಿಮ್ಯಾಂಡ್ ಡ್ರಾಫ್ಟ್ ಮೂಲಕ ಅರ್ಜಿಯೊಂದಿಗೆ ಲಗತ್ತಿಸಬೇಕು.

ಅರ್ಜಿಗಳನ್ನು ಇಲಾಖೆಯ ಜಾಲತಾಣದಲ್ಲಿ ಎಪ್ರಿಲ್ 20ರವರೆಗೆ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ತೋಟಗಾರಿಕೆ ಇಲಾಖೆಯ ಕಚೇರಿಯಲ್ಲಿ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರು (ರಾಜ್ಯ ವಲಯ) ಹಾಗೂ ತಾಲೂಕು ಮಟ್ಟದ ತೋಟಗಾರಿಕೆ ಅಧಿಕಾರಿಗಳನ್ನು ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಇಂದು ಅಂಬೇಡ್ಕರ್, ಬಾಬು ಜಗಜೀವನ ರಾಮ್ ಜಯಂತಿ

■ ವಿಜಯಸಾಕ್ಷಿ ಸುದ್ದಿ, ಗದಗ

ಎಪ್ರಿಲ್ 14ರಂದು ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿ ಹಾಗೂ ಬಾಬು ಜಗಜೀವನ ರಾಮ್ ಅವರ 119ನೇ ಜನ್ಮದಿನಾಚರಣೆಯನ್ನು ನಗರದ ವಿವಿಧೆಡೆ ವಿಜೃಂಭಣೆಯಿಂದ ಆಚರಿಸಲಾಗುತ್ತದೆ.

ಈ ನಿಮಿತ್ತ ಮುಂಜಾನೆ 9 ಗಂಟೆಗೆ ಗದಗ-ಬೆಟಗೇರಿ ನಗರಸಭೆ ಆವರಣದಿಂದ ಮೆರವಣಿಗೆ ಪ್ರಾರಂಭವಾಗಿ ಗಾಂಧಿ ಸರ್ಕಲ್, ಮಹೇಂದ್ರಕರ ಸರ್ಕಲ್, ಟಾಂಗಾ ಕೂಟ್, ಬಸವೇಶ್ವರ ಸರ್ಕಲ್, ಜೋಡುಮಾರುತಿ ದೇವಸ್ಥಾನ, ಪ್ರವಾಸಿ ಮಂದಿರ, ಮುಳಗುಂದ ನಾಕಾ ಮಾರ್ಗವಾಗಿ ಮಧ್ಯಾಹ್ನ 12 ಗಂಟೆಗೆ ಡಾ. ಬಿ.ಆರ್. ಅಂಬೇಡ್ಕರ್ ಭವನ ತಲುಪಲಿದೆ. ಮೆರವಣಿಗೆಯ ನಂತರ ವೇದಿಕೆ ಕಾರ್ಯಕ್ರಮ ಜರುಗಲಿದೆ. ಈ ಕಾರ್ಯಕ್ರಮಗಳಲ್ಲಿ ಜನಪ್ರತಿನಿಧಿಗಳು, ಜಿಲ್ಲಾ ಹಾಗೂ ತಾಲೂಕು ಮಟ್ಟದ ಅಧಿಕಾರಿಗಳು, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಹಿಂದುಳಿದ ವರ್ಗ ಹಾಗೂ ಅಲ್ಪಸಂಖ್ಯಾತ ಸಮುದಾಯಗಳ ಮುಖಂಡರು, ಸಂಘ-ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸುವಂತೆ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

**ತಂದೆಯಿಲ್ಲದೇ ಬೆಳೆದ 'ಜ್ಞಾನ ಕಿರಣ': ಗದಗ ವಿದ್ಯಾರ್ಥಿಗೆ ರಾಜ್ಯ ಮಟ್ಟದಲ್ಲಿ 10ನೇ ರ‍್ಯಾಂಕ್ ಸಾಧನೆ**

# ಜ್ಞಾನ 'ಕಿರಣ'ನಿಗೆ 'ಸನ್ಮಾರ್ಗ'ದ ಸಂತಸದ ಸನ್ಮಾನ

■ ವಿಜಯಸಾಕ್ಷಿ ಸುದ್ದಿ, ಗದಗ

ಆರ್ಥಿಕ ಸವಾಲುಗಳು, ಕುಟುಂಬದ ನೋವು–ಇವೆಲ್ಲವನ್ನೂ ಮೀರಿ ಸಾಧನೆ ಮಾಡಿದ ವಿದ್ಯಾರ್ಥಿಯೊಬ್ಬ ಇಂದು ಎಲ್ಲರ ಮೆಚ್ಚುಗೆಗೆ ಪಾತ್ರನಾಗಿದ್ದಾನೆ. ಕಿರಣ ಹಿರೇಮಠ ಎಂಬ ಯುವ ಪ್ರತಿಭೆ, 2025-2026ನೇ ಸಾಲಿನ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ರಾಜ್ಯಕ್ಕೆ 10ನೇ ರ‍್ಯಾಂಕ್ ಹಾಗೂ ಗದಗ ಜಿಲ್ಲೆಗೆ ದ್ವಿತೀಯ ಸ್ಥಾನ ಪಡೆದು ಗಮನ ಸೆಳೆದಿದ್ದಾನೆ.



ಸನ್ಮಾರ್ಗ ಪದವಿ ಪೂರ್ವ ಕಾಲೇಜಿನ ವಿಜ್ಞಾನ ವಿಭಾಗದ ವಿದ್ಯಾರ್ಥಿಯಾಗಿರುವ ಕಿರಣ, ಭೌತಶಾಸ್ತ್ರ ಮತ್ತು ಗಣಿತದಲ್ಲಿ ಶೇಕಡಾ 100 ಅಂಕಗಳನ್ನು ಗಳಿಸಿ ತನ್ನ ಪ್ರತಿಭೆಯನ್ನು ಸಾಬೀತುಪಡಿಸಿದ್ದಾನೆ. ಉಳಿದ ವಿಷಯಗಳಲ್ಲಿಯೂ ಗಣನೀಯ ಸಾಧನೆ ಮಾಡಿರುವ ಈ ವಿದ್ಯಾರ್ಥಿ, 'ಪ್ರತಿಭೆಗೆ ಪರಿಸ್ಥಿತಿ ಅಡ್ಡಿಯಾಗುವುದಿಲ್ಲ' ಎಂಬುದಕ್ಕೆ ಜೀವಂತ ಸಾಕ್ಷಿಯಾಗಿದ್ದಾನೆ.

ತಂದೆಯ ಅಗಲಿಕೆಯ ನೋವನ್ನು ಎದುರಿಸುತ್ತಲೇ ಅಜ್ಜನ ಆಶೀರ್ವಾದದಲ್ಲಿ ಬೆಳೆದ ಕಿರಣ, ಆರ್ಥಿಕವಾಗಿ ಸರಳ ಕುಟುಂಬದಲ್ಲಿದ್ದರೂ ವಿದ್ಯಾಭ್ಯಾಸದಲ್ಲಿ ಯಾವುದೇ ರಾಜಿ ಮಾಡಿಕೊಳ್ಳಲಿಲ್ಲ. ಶಿಸ್ತಿನ ಓದು, ಪರಿಶ್ರಮ ಮತ್ತು ಗುರಿ–ಇವೆಲ್ಲವೂ ಸೇರಿ ಇಂದು ಅವನಿಗೆ ರಾಜ್ಯ ಮಟ್ಟದ ಸಾಧನೆ ತಂದುಕೊಟ್ಟಿವೆ. ಈ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ ಸನ್ಮಾರ್ಗ ಪದವಿ ಪೂರ್ವ ಕಾಲೇಜು ಆಡಳಿತ ಮಂಡಳಿ, ಕಿರಣನ ಸ್ವಗೃಹದಲ್ಲಿಯೇ ಹೃದಯಸ್ಪರ್ಶಿ ಸನ್ಮಾನ ಕಾರ್ಯಕ್ರಮವನ್ನು ಆಯೋಜಿಸಿತ್ತು. ಸಂಸ್ಥೆಯ ಆಡಳಿತಾಧಿಕಾರಿ ಎಂ ಸಿ ಹಿರೇಮಠ ಮಾತನಾಡಿ, "ಕಿರಣ ಅತ್ಯಂತ ಸೌಮ್ಯ ಹಾಗೂ ನಿಯಮಿತ ವಿದ್ಯಾರ್ಥಿ. ಶಿಕ್ಷಕರಿಗೆ ಸದಾ ಮೆಚ್ಚಿನವನಾಗಿದ್ದ. ಅವನ ಮೇಲೆ ಇಟ್ಟಿದ್ದ ನಿರೀಕ್ಷೆಯನ್ನು ಮೀರಿಸಿ ಸಾಧನೆ ಮಾಡಿದ್ದಾನೆ" ಎಂದು ಪ್ರಶಂಸಿಸಿದರು.

ಇದೇ ವೇಳೆ ಸಂಸ್ಥೆಯ ಚೇರ್ಮನ್ ರಾಜೇಶ್ ಕುಲಕರ್ಣಿ, ಪ್ರಾಚಾರ್ಯ ಪುನೀತ್ ದೇಶಪಾಂಡೆ ಸೇರಿದಂತೆ ಉಪನ್ಯಾಸಕ ವೃಂದ ಕಿರಣನ ಮುಂದಿನ ಜೀವನ ಮತ್ತಷ್ಟು ಯಶಸ್ಸಿನತ್ತ ಸಾಗಲಿ ಎಂದು ಹಾರೈಸಿದರು.

**ನರೇಗಲ್ಲದಲ್ಲಿ ಸ್ವರಮಂದಾರ ಸಂಗೀತ ಪಾಠಶಾಲೆಯ ಪ್ರಥಮ ವಾರ್ಷಿಕೋತ್ಸವ ಸಂಭ್ರಮ**

# ಸಂಗೀತಕ್ಕೆ ಭಗವಂತನ ಸಾಕ್ಷಾತ್ಕಾರದ ಶಕ್ತಿ



■ ವಿಜಯಸಾಕ್ಷಿ ಸುದ್ದಿ, ನರೇಗಲ್

ಸಂಗೀತವು ಮನುಷ್ಯನ ಮನಸ್ಸನ್ನು ಮುದಗೊಳಿಸುವ ಶಕ್ತಿಯುತ ಸಾಧನವಾಗಿದ್ದು, ಮನಸ್ಸಿಗೆ ಸಮಾಧಾನ ನೀಡುವ ಸಂಗೀತಕ್ಕೆ ಭಗವಂತನನ್ನು ಸಾಕ್ಷಾತ್ಕರಿಸುವ ಸಾಮರ್ಥ್ಯವಿದೆ ಎಂದು ಶ್ರೀ ಅನ್ನದಾನ ವಿಜಯ ಬಾಲಿಕೆಯರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಸಂಗಮೇಶ ಹೂಲಗೇರಿ ಹೇಳಿದರು.

ಪಟ್ಟಣದ ಶ್ರೀ ಕಾಳಿಕಾದೇವಿ ಸಮುದಾಯ ಭವನದಲ್ಲಿ ನಡೆದ ಸ್ವರಮಂದಾರ ಸಂಗೀತ ಪಾಠಶಾಲೆಯ ಪ್ರಥಮ ವಾರ್ಷಿಕೋತ್ಸವದ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

ಸಂಗೀತವು ತಕ್ಷಣ ಅಳವಡಿಸಿಕೊಳ್ಳುವ ವಿದ್ಯೆಯಲ್ಲ; ಅದಕ್ಕೆ ನಿರಂತರ ಸಾಧನೆ ಅಗತ್ಯ. ಸಾಧನೆಗಾಗಿ ಶಿಸ್ತು ಮತ್ತು ಸಂಯಮ ಅತ್ಯವಶ್ಯಕವೆಂದು ಅವರು ತಿಳಿಸಿದರು. ನರೇಗಲ್ಲ ಪಟ್ಟಣದಲ್ಲಿ ಸಂಗೀತ ಪಾಠಶಾಲೆಯ ಅಗತ್ಯವಿದ್ದು, ಸಂಗೀತ ಶಿಕ್ಷಕಿ ಗೀತಾ ಭೋಪಳಾಪೂರ ಅವರು ಆ ಕೊರತೆಯನ್ನು ನೀಗಿಸಿ ಮಕ್ಕಳಿಗೆ ಉತ್ತಮವಾಗಿ ತರಬೇತಿ ನೀಡುತ್ತಿರುವುದು ಶ್ಲಾಘನೀಯ ಎಂದು ಹೇಳಿದರು.

ಅರುಣ ರಾಜಪುರೋಹಿತ ಮಾತನಾಡಿ, ಸಂಗೀತವನ್ನು ಸವಿಯುವುದು ಒಂದು ಅದ್ಭುತ ಅನುಭವ. ಪುರಂದರದಾಸರು, ಕನಕದಾಸರು, ಪಂಚಾಕ್ಷರಿ ಗವಾಯಿಗಳು, ಪುಟ್ಟರಾಜ ಕವಿಗವಾಯಿಗಳು, ಭಾರತರತ್ನ ಪಂ. ಭೀಮಸೇನ ಜೋಷಿ, ವಿದೂಷಿ ಗಂಗೂಬಾಯಿ ಹಾನಗಲ್ಲ, ಪಂ. ವೆಂಕಟೇಶ ಕುಮಾರ, ಪಂ. ಅನಂತ ಕುಲಕರ್ಣಿ ಮುಂತಾದ ಮಹಾನ್ ಸಂಗೀತಗಾರರ ಸಾಧನೆಗಳು ಸ್ಮರಣೀಯ. ಇಂತಹ ಶ್ರೇಷ್ಠ ಕಲಾವಿದರು ಈ ಪಾಠಶಾಲೆಯಿಂದ ಹೊರಹೊಮ್ಮಲಿ ಎಂದು ಹಾರೈಸಿದರು.

ರವೀಂದ್ರ ಜೋಷಿ ಕಾರ್ಯಕ್ರಮವನ್ನು ಉದ್ಘಾಟಿಸಿದರು. ನಂತರ ಪಾಠಶಾಲೆಯ ವಿದ್ಯಾರ್ಥಿಗಳಿಂದ ಸಂಗೀತ ಕಾರ್ಯಕ್ರಮ, ಆರುಷಿ ರಾಜಪುರೋಹಿತ ಅವರಿಂದ ಕೊಳಲು ವಾದನ, ಸಾಕ್ಷಿ ಪಾಟೀಲ ಅವರಿಂದ ಭರತನಾಟ್ಯ, ಹಾಗೂ ಗೀತಾ ಭೋಪಳಾಪೂರ ಅವರ ಗಾಯನ ಕಾರ್ಯಕ್ರಮಗಳು ನೆರೆದವರ ಮನಸೂರೆಗೊಂಡವು.

ಈ ಸಂದರ್ಭದಲ್ಲಿ ಸಂಗೀತ ವಿದ್ವಾಂಸರಾದ ಪಾಲಾಕ್ಷಯ್ಯ ಅರಳೆಲೆಮಠ, ಎಸ್.ಎಚ್. ಕುಲಕರ್ಣಿ, ಡಾ. ಆರ್.ಕೆ. ಗಚ್ಚಿನಮಠ, ನ್ಯಾಯವಾದಿ ನೀರಲೋಟಿ, ಶಿಕ್ಷಕರಾದ ರವಿ ಪಲ್ಲೇದ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ರಾಮು ಕೋಡೇಕಲ್ ಹಾರ್ಮೋನಿಯಂ ಸಾಥ್ ನೀಡಿದರೆ, ಆದರ್ಶ ಜಾಧವ ಮತ್ತು ನಾಗರಾಜ ಕಮ್ಮಾರ ತಬಲಾ ಸಹಕಾರ ನೀಡಿದರು. ಕಾರ್ಯಕ್ರಮವನ್ನು ಶ್ವೇತಾ ಕೊಟಗಿ ನಿರೂಪಿಸಿದರು. ಸಂಸ್ಥಾಪಕಿ ಗೀತಾ ಭೋಪಳಾಪೂರ ಸ್ವಾಗತಿಸಿದರು. ರಾಜು ಭೋಪಳಾಪೂರ ವಂದಿಸಿದರು.

> "ಸಂಗೀತವು ಮನುಷ್ಯನ ಮನಸ್ಸಿಗೆ ಶಾಂತಿ ನೀಡುವ ದಿವ್ಯ ಶಕ್ತಿ. ಭಗವಂತನನ್ನು ಸಾಕ್ಷಾತ್ಕರಿಸುವ ಮಾರ್ಗವಾಗಿಯೂ ಸಂಗೀತ ಕಾರ್ಯನಿರ್ವಹಿಸುತ್ತದೆ."
>
> – **ಸಂಗಮೇಶ ಹೂಲಗೇರಿ.**

> "ಸಂಗೀತವು ಕೇವಲ ಮನರಂಜನೆ ಮಾತ್ರವಲ್ಲ, ಅದು ಆಧ್ಯಾತ್ಮಿಕ ಅನುಭವ. ಮಹಾನ್ ಸಂಗೀತಗಾರರ ಪರಂಪರೆ ಮುಂದುವರಿಯಬೇಕು."
>
> – **ಅರುಣ ರಾಜಪುರೋಹಿತ.**

**ಎಂಜಿನಿಯರಿಂಗ್ ಶುಲ್ಕ ಹೆಚ್ಚಳಕ್ಕೆ ಎಐಡಿಎಸ್‌ಓ ವಿರೋಧ**

# ಸರ್ಕಾರ ತಕ್ಷಣ ನಿರ್ಧಾರ ಹಿಂಪಡೆಯಲಿ

■ ವಿಜಯಸಾಕ್ಷಿ ಸುದ್ದಿ, ಗದಗ

2026-27ನೇ ಶೈಕ್ಷಣಿಕ ಸಾಲಿಗೆ ಸರ್ಕಾರಿ ಕೋಟಾದಡಿ ಎಂಜಿನಿಯರಿಂಗ್ ಸೀಟುಗಳ ಶುಲ್ಕವನ್ನು ಶೇಕಡಾ 7.5ರಷ್ಟು ಹೆಚ್ಚಿಸಲು ಕರ್ನಾಟಕ ಸರ್ಕಾರ ತೆಗೆದುಕೊಂಡಿರುವ ನಿರ್ಧಾರಕ್ಕೆ ಎಐಡಿಎಸ್‌ಓ ತೀವ್ರ ವಿರೋಧ ವ್ಯಕ್ತಪಡಿಸಿದೆ ಎಂದು ಸಂಘಟನೆಯ ಜಿಲ್ಲಾ ಸಂಚಾಲಕರಾದ ಎಂ. ಶಾಂತಿ ತಿಳಿಸಿದ್ದಾರೆ.

ಪರಿಷ್ಕೃತ ಶುಲ್ಕದ ಪ್ರಕಾರ, ಟೈಪ್-1 ಖಾಸಗಿ ಕಾಲೇಜುಗಳಲ್ಲಿ 81,800ರಿಂದ 87,935ಕ್ಕೆ, ಟೈಪ್-2 ಕಾಲೇಜುಗಳಲ್ಲಿ 91,000ರಿಂದ 97,825ಕ್ಕೆ ಹೆಚ್ಚಳವಾಗಿದೆ. ಹಾಗೆಯೇ ಕಾಮೆಡ್-ಕೆ ಟೈಪ್-1 ಕಾಲೇಜುಗಳಲ್ಲಿ 2 ಲಕ್ಷದಿಂದ 2.15 ಲಕ್ಷಕ್ಕೆ ಹಾಗೂ ಟೈಪ್-2 ಕಾಲೇಜುಗಳಲ್ಲಿ 2.81 ಲಕ್ಷದಿಂದ 3.02 ಲಕ್ಷಕ್ಕೆ ಶುಲ್ಕ ಏರಿಕೆ ಮಾಡಲಾಗಿದೆ.



ಈ ಬಗ್ಗೆ ಪ್ರತಿಕ್ರಿಯಿಸಿದ ಎಂ. ಶಾಂತಿ, "ಮಾರುಕಟ್ಟೆ ಆಧಾರಿತವಾಗಿ ಶಿಕ್ಷಣದ ಶುಲ್ಕವನ್ನು ಹೆಚ್ಚಿಸುವುದು ಶಿಕ್ಷಣವನ್ನು ಖಾಸಗಿ ಸಂಸ್ಥೆಗಳ ಲಾಭದ ಸರಕಾಗಿಸುತ್ತಿದೆ. ಇದರ ಪರಿಣಾಮವಾಗಿ ಮಧ್ಯಮ ವರ್ಗದ ವಿದ್ಯಾರ್ಥಿಗಳು ಇಂಜಿನಿಯರಿಂಗ್ ಶಿಕ್ಷಣದಿಂದ ದೂರವಾಗುತ್ತಿದ್ದಾರೆ," ಎಂದು ಆತಂಕ ವ್ಯಕ್ತಪಡಿಸಿದರು.

"ಶಿಕ್ಷಣವು ಮೂಲಭೂತ ಹಕ್ಕು ಮತ್ತು ಸರ್ಕಾರದ ಸಾಮಾಜಿಕ ಜವಾಬ್ದಾರಿಯಾಗಿದೆ. ಅದನ್ನು ಲಾಭದ ವಸ್ತುವಾಗಿ ಪರಿಗಣಿಸುವುದು ಸರಿಯಲ್ಲ. ಹೆಚ್ಚುತ್ತಿರುವ ಶುಲ್ಕವು ಖಾಸಗಿ ಹಿತಾಸಕ್ತಿಗಳ ಪ್ರಭಾವವನ್ನು ತೋರಿಸುತ್ತಿದೆ," ಎಂದು ಅವರು ಹೇಳಿದರು.

ಸರ್ಕಾರವು ಕೂಡಲೇ ಶುಲ್ಕ ಹೆಚ್ಚಳವನ್ನು ಹಿಂಪಡೆಯಬೇಕು ಹಾಗೂ ಎಲ್ಲರಿಗೂ ಕೈಗೆಟಕುವ ರೀತಿಯಲ್ಲಿ ಶುಲ್ಕ ನಿಗದಿಪಡಿಸಬೇಕು. ಶಿಕ್ಷಣ ಕ್ಷೇತ್ರದ ವ್ಯಾಪಾರೀಕರಣ ಮತ್ತು ಖಾಸಗೀಕರಣವನ್ನು ತಡೆಯಲು ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳಬೇಕೆಂದು ಎಂ. ಶಾಂತಿ ಆಗ್ರಹಿಸಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka